ಸಂಪುಟ : 9 ಸಂಚಿಕೆ 92 ಪುಟ : 4 ಬೆಲೆ: 3.00 ರವಿವಾರ ಮೇ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 92 Pages : 4 Price : 3.00 Sunday May 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ‘ಶರಣರು ಕಂಡ ಬಸವಣ್ಣ’ ಉಪನ್ಯಾಸ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿವಾರದಂತೆ ದಿ. 12-05-2024 ರವಿವಾರ ಬೆಳಿಗ್ಗೆ 11-00 ಕ್ಕೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನಡೆಯಲಿರುವ ಬಸವದಳದ 1593 ನೇ ಶರಣ ಸಂಗಮದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರ 919 ನೇ ಜಯಂತಿ ಅಂಗವಾಗಿ “ಶರಣರು ಕಂಡ ಬಸವಣ್ಣ” ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷರಾದ ಶರಣ ವಿ. ಕೆ. ಕರೇಗೌಡ್ರ ವಹಿಸುವರು. ಉಪನ್ಯಾಸವನ್ನು ರಾಷ್ಟ್ರೀಯ ಬಸವದಳದ, ಬಸವತತ್ವದ ಚಿಂತಕರಾದ ಶರಣೆ ಗಂಗಾಂಬಿಕೆ ಬಸವರಾಜ ನೀಡುವರು. ಅತಿಥಿಗಳಾಗಿ ಶರಣ ಎಚ್. ಎಸ್. ಬಸವರಾಜಪ್ಪನವರು ಇವರು ಆಗಮಿಸುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

## ಜನರನ್ನು ತಪ್ಪು ದಾರಿಗೆ ಎಳೆಯಲು ಮೋದಿ ಸುಳ್ಳುಗಳನ್ನು ಹರಡುತ್ತಿದ್ದಾರೆ: ಮಲ್ಲಿಕಾರ್ಜುನ ಖರ್ಗೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ಜನರನ್ನು ತಪ್ಪುದಾರಿಗೆಳೆಯಲು ಮತ್ತು ಪ್ರಚೋದಿಸಲು ಸುಳ್ಳುಗಳನ್ನು ಹರಡುತ್ತಿದ್ದಾರೆ, ಅವರು ಸುಳ್ಳುಗಾರರ ನಾಯಕ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿಯನ್ನು ನಡೆಸಿದ್ದಾರೆ.

ಹೈದರಾಬಾದ್‌ನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ‘ಸಣ್ಣತನದ ಮತ್ತು ಬಾಲಿಶ’ ಮಾತುಗಳನ್ನಾಡುವುದು ಪ್ರಧಾನಿ ಮೋದಿಗೆ ಯೋಗ್ಯವಲ್ಲ, ಪ್ರಧಾನಿ ಮೋದಿ ಸುಳ್ಳುಗಾರರ ನಾಯಕ, ಅವರು ಚುನಾವಣಾ ಪ್ರಣಾಳಿಕೆಯ ಬಗ್ಗೆ ಏಕೆ ಮಾತನಾಡುತ್ತಿಲ್ಲ ಮತ್ತು ಕಳೆದ 10 ವರ್ಷಗಳಲ್ಲಿ ಅವರ ಸರ್ಕಾರ ಏನು ಮಾಡಿದೆ ಎಂಬುವುದನ್ನು ಯಾಕೆ ಹೇಳುತ್ತಿಲ್ಲ? ಅವರು ತಮ್ಮ ಕೆಲಸದ ಮೇಲೆ ಮತಗಳನ್ನು ಕೇಳುವುದಿಲ್ಲ. ಅವರು ಕೇವಲ ಕಾಂಗ್ರೆಸ್‌ನ್ನು ನಿಂದಿಸುತ್ತಾರೆ ಮತ್ತು ಕಾಂಗ್ರೆಸ್‌ನ ಹೇಳಿಕೆಗಳನ್ನು ತಿರುಚುತ್ತಾರೆ ಎಂದು ಹೇಳಿದ್ದಾರೆ.

### ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣ ತನಿಖೆ ನ್ಯಾಯಂಗದ ಉಸ್ತುವಾರಿಯಲ್ಲಿ ನಡೆಸಲು ಒತ್ತಾಯ

# 13 ರಂದು ಹಾಸನ ಚಲೋ




■ವಿಜಯಸಾಕ್ಷಿ ಸುದ್ದಿ, ಗದಗ

ಹಾಸನ ಸಂಸದ ಪ್ರಜ್ವಲ್ ರೇವಣ್ಣಗೆ ಸಂಬಂಧಪಟ್ಟಿರುವ ಪೆನ್‌ಡ್ರೈವ್ ಪ್ರಕರಣದ ತನಿಖೆಯನ್ನು ನ್ಯಾಯಾಂಗದ ಉಸ್ತುವಾರಿಯಲ್ಲಿ ನಡೆಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷವು ಮೇ 13ರಂದು ‘ಅಬಲೆಯರನ್ನು ಗೌರವಿಸೋಣ; ಅತ್ಯಾಚಾರಿಗೆ ತಕ್ಕ ಶಾಸ್ತಿ ಮಾಡೋಣ: ಹಾಸನ ಚಲೋ’ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಕೆಆರ್‌ಎಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೀರನಗೌಡ ಮೂಗನೂರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣ ರಾಜ್ಯದ ಮರ್ಯಾದೆಯನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಹರಾಜು ಹಾಕಿದೆ. ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳಿಗೆ ಮಹಿಳೆಯರ ಸುರಕ್ಷತೆ ಮತ್ತು ಗೌರವ ಕಾಪಾಡುವ ಬದ್ಧತೆ ಇಲ್ಲ. ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಈ ಪ್ರಕರಣವನ್ನು ಬಳಸಿಕೊಳ್ಳುತ್ತಿದ್ದಾರೆ. ಪೆನ್‌ಡ್ರೈವ್ ಪ್ರಕರಣದ ತನಿಖೆ ನಡೆಸುತ್ತಿರುವ ಸರ್ಕಾರದ ಬಗ್ಗೆಯೂ ನಮಗೆ ಸಂದೇಹಗಳಿದ್ದು, ಸಂತ್ರಸ್ತೆಯರಿಗೆ ನ್ಯಾಯ ಸಿಗುವ ಭರವಸೆ ಇಲ್ಲ. ಆದಕಾರಣ ಈ ಪ್ರಕರಣವನ್ನು ನ್ಯಾಯಾಂಗದ ಉಸ್ತುವಾರಿಯಲ್ಲಿ ನಡೆಸಬೇಕು ಎಂದು ಆಗ್ರಹಿಸಿದರು.

ಪ್ರಕರಣಕ್ಕೆ ಸಂಬಂಧಪಟ್ಟಂತೆ ಕೆಆರ್‌ಎಸ್ ಪಕ್ಷವು ಏ.27ರಂದೇ ಹೊಳೆನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಿಸಿತ್ತು. ಆದರೆ, ಅಧಿಕಾರಿಗಳು ನಮ್ಮ ದೂರನ್ನು ಗಂಭೀರವಾಗಿ ಪರಿಗಣಿಸದ ಕಾರಣ ಪ್ರಜ್ವಲ್ ರೇವಣ್ಣ ದೇಶಬಿಟ್ಟು ಪರಾರಿಯಾದ ಎಂದು ಆರೋಪಿಸಿದರು.

> ಸಂಸದ ಪ್ರಜ್ವಲ್ ರೇವಣ್ಣ ಸಹಾಯ ಕೇಳಿ ಬಂದ ಹೆಣ್ಣುಮಕ್ಕಳನ್ನು ಕಾಮತೃಷೆಗೆ ಬಳಸಿಕೊಂಡಿದ್ದಾನೆ. ಹಣ ಮತ್ತು ಅಧಿಕಾರದ ದರ್ಪದಿಂದ ಲೈಂಗಿಕ ಶೋಷಣೆ ನಡೆಸಿದ್ದಾನೆ. ಇಲ್ಲಿ ಶೋಷಣೆಗೆ ಒಳಗಾಗಿರುವ ಹೆಣ್ಣು ಮಕ್ಕಳದ್ದು ಯಾವುದೇ ತಪ್ಪಿಲ್ಲ, ಅವರು ಬಲಿಪಶುಗಳಾಗಿದ್ದಾರೆ. ಸಂತ್ರಸ್ತ ಮಹಿಳೆಯರ ಕುಟುಂಬದವರು ಸೇರಿದಂತೆ ಇಡೀ ಸಮಾಜ ಅವರಿಗೆ ಧೈರ್ಯ ತುಂಬುವ ಕೆಲಸ ಮಾಡಬೇಕು’
>
> –ವೀರನಗೌಡ ಮೂಗನೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಕೆಆರ್‌ಎಸ್ ಪಾರ್ಟಿ, ಗದಗ

ಹೆಣ್ಣುಮಕ್ಕಳ ಸುರಕ್ಷತೆ, ಸಾಕ್ಷಿ ನಾಶ, ಸಂತ್ರಸ್ತರಿಗೆ ಬೆದರಿಗೆ ಒಡ್ಡುವುದನ್ನು ತಪ್ಪಿಸಿ, ಆರೋಪಿಗೆ ಅತ್ಯಂತ ಕಠಿಣ ಶಿಕ್ಷೆ ವಿಧಿಸಬೇಕು. ಅದೇ ರೀತಿ, ಅಶ್ಲೀಲ ವಿಡಿಯೊಗಳನ್ನು ಹಂಚಿಕೆ ಮಾಡಿದವರನ್ನೂ ಬಂಧಿಸಿ, ಅವರಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಆಗ್ರಹಿಸಿ ಹಾಸನ ಚಲೋ ಹಮ್ಮಿಕೊಳ್ಳಲಾಗಿದೆ. ಗದಗ ಜಿಲ್ಲೆಯಿಂದಲೂ ಪಕ್ಷದ ಕಾರ್ಯಕರ್ತರು, ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಕೆಆರ್‌ಎಸ್ ಪಕ್ಷದ ಮುಖಂಡರಾದ ನೀಲಪ್ಪ ಕಟಗಿ, ಖಾದರ್ ತೆಕ್ಕಲಕೋಟೆ, ಅನಿಲ್ ಅರಗಂಜಿ, ರಫೀಕ್ ಅಣ್ಣಿಗೇರಿ, ಕೊಟ್ರೇಶ ಮುಳಗುಂದ, ಎಸ್. ಎನ್.ಪಾಟೀಲ, ಫಾರೂಕ್ ಕಟ್ಟಿಮನಿ, ಮೌಲಾಸಾಬ್ ಪೆಂಡಾರಿ, ಖಾನ್‌ಸಾಬ್ ಇದ್ದರು.



## ಸಂಪಾದಕೀಯ

### ಹಿಂದೂ ಬಾಲಕಿ ಹತ್ಯೆ ಖಂಡಿಸುವುದಿಲ್ಲವೇ?

ಕೊಡಗು ಜಿಲ್ಲೆಯಲ್ಲಿ ನಡೆದ ಬಾಲಕಿ ಹತ್ಯೆ ರಾಜ್ಯವನ್ನೆ ಬೆಚ್ಚಿ ಬೀಳಿಸಿದೆ. ಹುಚ್ಚು ಪ್ರೇಮಿಯೊಬ್ಬ ಬಾಲಕಿಯ ರುಂಡವನ್ನ ಚಂಡಾಡಿದ್ದಾನೆ. ಕೊಲೆಯ ಭೀಕರತೆಗೆ ಕೊಡಗು ಜಿಲ್ಲೆ ಆಘಾತಕ್ಕೆ ಒಳಗಾಗಿದೆ.

ರಾಜ್ಯದಲ್ಲಿ ಈ ಹಿಂದೆಯೂ ಕೂಡ ಪ್ರೀತಿ ಪ್ರೇಮದ ವಿಚಾರಕ್ಕೆ ಕೊಲೆಗಳು ನಡೆದಿವೆ. ಅದರ ಸಾಲಿಗೆ ಈಗ ಕೊಡಗು ಜಿಲ್ಲೆಯ ಘಟನೆ ಸೇರಿಕೊಂಡಿದೆ. ಸದ್ಯಕ್ಕೆ ಈ ಪ್ರಕರಣವನ್ನು ಕೇವಲ ವೈಯಕ್ತಿಕ ನೆಲೆಯಲ್ಲಿ ನೋಡಬೇಕಾಗಿದೆ. ಕೊಲೆ ಮಾಡಿದ ಆರೋಪಿಗೆ ಕಠಿಣ ಶಿಕ್ಷೆ ಆಗಲೇಬೇಕು. ನ್ಯಾಯದಾನ ವ್ಯವಸ್ಥೆ ಅದನ್ನ ತುರ್ತಾಗಿ ಮಾಡಿಕೊಡಬೇಕು.


ತಿಂಗಳ ಹಿಂದೆ ಇದೇ ರೀತಿಯ ಒಂದು ಕೊಲೆ ಹುಬ್ಬಳ್ಳಿಯಲ್ಲಿಯೂ ನಡೆದಿತ್ತು. ಆದರೆ ಆ ಕೊಲೆಯನ್ನ ರಾಜಕೀಯಕ್ಕೆ ಬಳಸಿಕೊಳ್ಳಲಾಯಿತು. ಕೋಮು ದ್ವೇಷ ಬಿತ್ತುವ ಪ್ರಯತ್ನಗಳು ನಡೆದವು. ಕೆಲವರಿಗೆ ಆ ಘಟನೆ ರಾಜಕೀಯ ಲಾಭವನ್ನು ತಂದುಕೊಟ್ಟಿತು.

ಹುಬ್ಬಳ್ಳಿಯಲ್ಲಿ ಹತ್ಯೆಯಾದ ನೇಹಾ ಹಿರೇಮಠ ಕೊಲೆಗೆ ಇಡೀ ರಾಜ್ಯವೇ ಆಕ್ರೋಶವನ್ನು ವ್ಯಕ್ತಪಡಿಸಿತು. ಅನೇಕ ದೊಡ್ಡ ದೊಡ್ಡ ನಾಯಕರು, ಸಿನಿಮಾ ನಟರು, ನಟಿಯರು ಕಣ್ಣೀರು ಸುರಿಸಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು. ಉನ್ನತ ಶಿಕ್ಷಣ ಪಡೆದು ಬಾಳಿ ಬದುಕಬೇಕಾಗಿದ್ದ ಯುವತಿಯೊಬ್ಬಳು ಬರ್ಬರ ಹತ್ಯೆಯಾಗಿದ್ದು ಆಘಾತಕಾರಿ ಸಂಗತಿಯೆ.

ಅದೇ ರೀತಿಯ ಕೊಲೆ ಇವತ್ತು ಕೊಡಗು ಜಿಲ್ಲೆಯಲ್ಲಿಯೂ ನಡೆದಿದೆ. ಹಿಂದೂ ಬಾಲಕಿಯೊಬ್ಬಳು ಈ ರೀತಿ ಭೀಕರವಾಗಿ ಕೊಲೆಯಾದರೂ ಯಾರೊಬ್ಬರೂ ಖಂಡನೆ ವ್ಯಕ್ತಪಡಿಸುತ್ತಿಲ್ಲ. ರಾಜಕಾರಣಿಗಳು ಅವರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳುವ ಕೆಲಸ ಮಾಡುತ್ತಿಲ್ಲ. ರಾಜಕೀಯ ಲಾಭ ಪಡೆಯುವ ಯಾವುದೇ ಪ್ರಯತ್ನಗಳು ಕೂಡ ಕಾಣುತ್ತಿಲ್ಲ.

ರಾಜ್ಯದಲ್ಲಿ ಈ ಕೊಲೆಗಳು ಒಂದೇ ರೀತಿಯಲ್ಲಿ ನಡೆದರೂ ಅದನ್ನು ನೋಡುವ ದೃಷ್ಟಿಕೋನ ಮಾತ್ರ ಬೇರೆ ಬೇರೆಯಾಗಿದೆ. ಕೇವಲ ರಾಜಕೀಯ ಕಾರಣಕ್ಕಾಗಿ ಇಂತಹ ಘಟನೆಗಳನ್ನು ಬಳಸಿಕೊಳ್ಳುವವರು ಇವತ್ತು ಮೌನವಾಗಿದ್ದಾರೆ. ಹಿಂದೂ ಬಾಲಕಿಯ ಹತ್ಯೆ ನಡೆದರೂ ಹಿಂದೂ ಪರ ಸಂಘಟನೆಗಳ ಮೌನ ಅನುಮಾನಕ್ಕೆ ಕಾರಣವಾಗಿದೆ. ಪ್ರಜ್ಞಾವಂತರು ಈ ಬಗ್ಗೆ ಚಿಂತನೆ ನಡೆಸಬೇಕಾದ ಅನಿವಾರ್ಯತೆ ಇದೆ.

## ಲೈಂಗಿಕ ದೌರ್ಜನ್ಯ ಪ್ರಕರಣ: ಬಿಜೆಪಿ ಮುಖಂಡ ಜಿ ದೇವರಾಜೇಗೌಡ ಬಂಧನ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಾಸನದ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರ ಲೈಂಗಿಕ ಕಿರುಕುಳ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಮುಖಂಡ ಮತ್ತು ವಕೀಲ ಜಿ ದೇವರಾಜೇಗೌಡ ಅವರನ್ನು ಬಂಧಿಸಲಾಗಿದೆ.

ಪೆನ್ ಡ್ರೈವ್‌ನಲ್ಲಿದ್ದ ಸ್ಪಷ್ಟ ವೀಡಿಯೊವನ್ನು ಸೋರಿಕೆ ಮಾಡಿದ ಆರೋಪ ಮತ್ತು ಮಹಿಳೆಯೋರ್ವಳ ಮೇಲೆ ಲೈಂಗಿಕ ದೌರ್ಜನ್ಯದ ಆರೋಪದಡಿ ದೇವರಾಜೇಗೌಡನನ್ನು ಬಂಧಿಸಲಾಗಿದೆ. ಹಿರಿಯೂರು ತಾಲ್ಲೂಕಿನ ಕೆಆರ್ ಹಳ್ಳಿ ಗೇಟ್ ಬಳಿ ಇನೋವಾ ಕಾರಿನಲ್ಲಿ ಬರುತ್ತಿದ್ದಾಗ ಶುಕ್ರವಾರ ರಾತ್ರಿ ಹಿರಿಯೂರು ಗ್ರಾಮಾಂತರ ಪೊಲೀಸರು ದೇವರಾಜೇಗೌಡನನ್ನು ಬಂಧಿಸಿದ್ದಾರೆ.

ದೇವರಾಜೇಗೌಡ ನಿವೇಶನವನ್ನು ಮಾರಾಟ ಮಾಡಿಕೊಡುವ ನೆಪದಲ್ಲಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಎ.1ರಂದು ಹೊಳೆನರಸೀಪುರ ನಗರ ಠಾಣೆಯಲ್ಲಿ ಸಂತ್ರಸ್ತ ಮಹಿಳೆ ದೂರು ನೀಡಿದ್ದು, ಆತನ ವಿರುದ್ಧವು ಪ್ರಕರಣ ದಾಖಲಾಗಿತ್ತು.

**ದೇವರಾಜೇಗೌಡ ಯಾರು?** ಬಿಜೆಪಿ ನಾಯಕ ಮತ್ತು ವೃತ್ತಿಯಲ್ಲಿ ವಕೀಲರಾಗಿರುವ ದೇವರಾಜೇಗೌಡ, ಪ್ರಜ್ವಲ್ ರೇವಣ್ಣ ಅವರು ಹಲವಾರು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಬಗ್ಗೆ ಕಳೆದ ವರ್ಷ ಬಿಜೆಪಿ ನಾಯಕರಿಗೆ ಎಚ್ಚರಿಸಿದ್ದರು. ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡರೆ ಪ್ರಭಾವ ಬೀರುವ ಸಾಧ್ಯತೆ ಬಗ್ಗೆ ಹೇಳಿಕೊಂಡಿದ್ದರು ಎನ್ನಲಾಗಿದೆ. ಆದರೆ, ಗೌಡರು ತಮಗೆ ವಿಡಿಯೊಗಳ ಕುರಿತ ಪತ್ರವನ್ನು ಕಳುಹಿಸಿದ್ದಾರೆ ಎಂಬುದಾಗಿ ಹೇಳಿರುವುದು ಸುಳ್ಳು ಎಂದು ಬಿಜೆಪಿ ರಾಜ್ಯಾಧ್ಯಕ್ಷರು ಹೇಳಿದ್ದಾರೆ. 2023ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಪ್ರಜ್ವಲ್ ಅವರ ತಂದೆ ಹೊಳೆನರಸೀಪುರ ಶಾಸಕ ಎಚ್‌ಡಿ ರೇವಣ್ಣ ವಿರುದ್ಧ ಗೌಡರು ಸ್ಪರ್ಧಿಸಿದ್ದರು.

**ದೇವರಾಜೇಗೌಡ ಮೇಲೆ ದೌರ್ಜನ್ಯ ಪ್ರಕರಣ:** ದೇವರಾಜೇಗೌಡ ಮತ್ತು ಇತರರು ಲೈಂಗಿಕ ಕಿರುಕುಳ ಮತ್ತು ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ಮಹಿಳೆಯೊಬ್ಬರು ನೀಡಿದ ದೂರಿನ ಮೇರೆಗೆ ಹಾಸನದ ಹೊಳೆನರಸೀಪುರ ಪಟ್ಟಣದಲ್ಲಿ ಎಫ್‌ಐಆರ್ ದಾಖಲಾಗಿದೆ.

ಗೌಡರ ವಿರುದ್ಧ ಐಪಿಸಿಯ ಸೆಕ್ಷನ್ 354 (ಎ), 354 ಸಿ, 448, 504, 506, 34 ಮತ್ತು ಮಾಹಿತಿ ತಂತ್ರಜ್ಞಾನ ಕಾಯ್ದೆ 2008ರ 66 (ಇ) ಅಡಿಯಲ್ಲಿ ಮಹಿಳೆಯ ಮೇಲೆ ದೌರ್ಜನ್ಯ ಮತ್ತು ಹಲ್ಲೆ ಸೇರಿದಂತೆ ವಿವಿಧ ಸೆಕ್ಸನ್‌ಗಳಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಎಫ್‌ಐಆರ್‌ನಲ್ಲಿ ದೇವರಾಜೇಗೌಡ ಅವರನ್ನು ಹೊರತುಪಡಿಸಿ ಇತರ ಮೂವರನ್ನು ಹೆಸರಿಸಲಾಗಿತ್ತು.

ಇನ್ನು ಪ್ರಜ್ವಲ್ ರೇವಣ್ಣ ಪ್ರಕರಣವನ್ನು ರಾಜ್ಯ ಪೊಲೀಸರ ವಿಶೇಷ ತನಿಖಾ ತಂಡ (ಎಸ್‌ಐಟಿ) ತನಿಖೆ ನಡೆಸುತ್ತಿದೆ. ಆತನ ವಿರುದ್ಧ ಅತ್ಯಾಚಾರ, ಕಿರುಕುಳ, ಬೆದರಿಕೆ ಕುರಿತಂತೆ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ಪ್ರಜ್ವಲ್ ವಿದೇಶದಲ್ಲಿ ತಲೆಮರೆಸಿಕೊಂಡಿದ್ದೇನೆ, ಆತನ ಪತ್ತೆಗೆ ಎಸ್‌ಐಟಿ ಬ್ಲೂ ಕಾರ್ನರ್ ನೋಟೀಸ್ ಜಾರಿ ಮಾಡಿದೆ. ಇನ್ನು ಪ್ರಜ್ವಲ್ ರೇವಣ್ಣ ಪ್ರಕರಣದ ಸಂತ್ರಸ್ತೆ ಮಹಿಳೆಯನ್ನು ಕಿಡ್ನಾಪ್ ಮಾಡಿದ ಆರೋಪದಲ್ಲಿ ರೇವಣ್ಣ ಅವರನ್ನು ಪೊಲೀಸರು ಬಂಧಿಸಿದ್ದು, ಸಧ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ.

# ಗಂಡ ಹೆಂಡಿರ ಜಗಳ... ಗಂಧ ತೀಡಿದಂಗ.....



ಪ್ರವೀಣ್ ಮತ್ತು ಪ್ರಿಯಾ ಒಂದೇ ಆಫೀಸಿನಲ್ಲಿ ಕೆಲಸ ಮಾಡುತ್ತಿದ್ದ ಸಹೋದ್ಯೋಗಿಗಳು. ಪರಸ್ಪರ ಸ್ನೇಹ ಪ್ರೇಮವಾಗಿ, ಪ್ರೇಮಕ್ಕೆ ಹಿರಿಯರ ಒಪ್ಪಿಗೆ ದೊರೆತು ಮದುವೆ ಎಂಬ ಮುದ್ರೆ ಬಿದ್ದು ಆರು ತಿಂಗಳಾಗಿತ್ತು. ಇಬ್ಬರೂ ಸಿಟಿ ಬಸ್ಸಿನಲ್ಲಿ ಒಟ್ಟಿಗೆ ಆಫೀಸಿಗೆ ಹೋಗಿ ಬರುತ್ತಿದ್ದರು.

ಅದೊಂದು ದಿನ ದಂಪತಿಗಳಿಬ್ಬರೂ ಯಾವುದೋ ಕಾರಣಕ್ಕೆ ಜಗಳವಾಡಿ ಮುನಿಸಿಕೊಂಡಿದ್ದರು. ಇಬ್ಬರಲ್ಲಿ ಯಾರೊಬ್ಬರೂ ಸೋತು ಮಾತನಾಡಲಿಲ್ಲ. ಪ್ರಿಯಾ ತನ್ನ ಪಾಡಿಗೆ ತಾನು ಎದ್ದು ಮನೆ ಕೆಲಸ ಪೂರೈಸಿ ತಿಂಡಿ ಮಾಡಿದರೆ, ಪ್ರವೀಣ್ ನಿತ್ಯ ವಿಧಿಗಳನ್ನು ಪೂರೈಸಿ ತಿಂಡಿ ತಿಂದು ಮನೆಯ ಹೊರಗೆ ನಿಂತನು. ಇಷ್ಟೊತ್ತಿಗೆ ತಿಂಡಿ ತಿಂದು ರೆಡಿಯಾಗುತ್ತಿದ್ದ ಆಕೆ ಕೂಡ ತನ್ನ ಅಲಂಕಾರವನ್ನು ಪೂರೈಸಿ ಇಬ್ಬರಿಗೂ ಊಟದ ಡಬ್ಬಿ ಮತ್ತು ನೀರನ್ನು ತೆಗೆದು-ಕೊಂಡು ಮನೆಯ ಹೊರಬಂದು ನಿಲ್ಲಲು, ಆತ ಮನೆಯ ಬಾಗಿಲನ್ನು ಚಿಲಕ ಹಾಕಿ ಕೀಲಿ ಜಡಿದನು. ಪರಸ್ಪರ ಮಾತನಾಡದೆ ಇದ್ದರೂ ಜೊತೆಯಾಗಿಯೇ ಬಸ್‌ಸ್ಟಾಪ್‌ಗೆ ಬಂದು ನಿಂತ ಆ ದಂಪತಿಗಳಲ್ಲಿ ಪತ್ನಿ ಯಾವಾಗಲೂ ಕೂಡುತ್ತಿದ್ದ ಹಾಗೆ ಪತಿಯ ಪಕ್ಕ ಕುಳಿತುಕೊಳ್ಳದೆ ಮುಂದಿನ ಸೀಟಿಗೆ ಹೋಗಿ ಕುಳಿತಳು. ಇದನ್ನು ನೋಡಿ ತುಸು ಅಸಮಾಧಾನಗೊಂಡರೂ ಏನೂ ಮಾಡಲಾಗದೆ ಕೈ ಕೈ ಹಿಸುಕಿಕೊಂಡು ಸುಮ್ಮನೆ ಕುಳಿತ ಪತಿರಾಯ.

ಪಕ್ಕಕ್ಕೆ ತಿರುಗಿ ನೋಡಿದ ಪ್ರಿಯಾಗೆ ಕಂಡದ್ದು ಒಬ್ಬ ಆಕರ್ಷಕ ವ್ಯಕ್ತಿತ್ವದ 30ರ ಹರೆಯದ ಸುಂದರ ತರುಣ. ಅದೇ ಸಮಯಕ್ಕೆ ಆತನು ಕೂಡ ಈಕೆಯತ್ತ ತಿರುಗಿ ನೋಡಿದಾಗ ಪರಸ್ಪರ ಮುಗುಳ್ನಗೆ ವಿನಿಮಯವಾಯಿತು. ಕೆಲ ಕ್ಷಣಗಳ ನಂತರ ಆಕೆಯೊಂದಿಗೆ ಕುಶಲೋಪರಿಯನ್ನು ಆರಂಭಿಸಿದ ಆ ವ್ಯಕ್ತಿ. ಆಕೆಯೂ ಕೂಡ ಆತನ ಮಾತಿಗೆ ಸ್ಪಂದಿಸಿದಳು. ಕೆಲವು ನಿಮಿಷಗಳ ಮಾತುಕತೆಯ ನಂತರ ಆತ ತಾನು ಕಾರನ್ನು ಸರ್ವಿಸ್‌ಗೆ ಬಿಟ್ಟಿರುವುದರಿಂದ ಇಂದು ಬಸ್ಸಿನಲ್ಲಿ ಬಂದಿರುವುದಾಗಿ ಹೇಳಿದನು. ಜೊತೆಗೆ ತನ್ನ ಮನೆಯಲ್ಲಿ ಮದುವೆಗೆ ಒತ್ತಾಯ ಮಾಡುತ್ತಿರುವುದರಿಂದ ಸೂಕ್ತವಾದ ಕನ್ಯೆಯ ಹುಡುಕಾಟದಲ್ಲಿರುವೆ ಎಂದು ಆಕೆಯನ್ನು ಆಪಾದಮಸ್ತಕ ನೋಡುತ್ತಾ ಹೇಳಿದನು.

ಹಿಂದೆಯೇ ಕುಳಿತು ಇವರ ಮಾತುಗಳನ್ನು ಕೇಳುತ್ತಾ ಚಡಪಡಿಸುತ್ತಿದ್ದ ಪತಿರಾಯನಿಗೆ ಸುಮ್ಮನೆ ಕೂರಲಾಗಲಿಲ್ಲ. ಕೂಡಲೇ ಪತ್ನಿಯನ್ನು ಉದ್ದೇಶಿಸಿ ಪ್ರಿಯಾ, ಸಾನ್ವಿ ಪುಟ್ಟಿಯ ಬರ್ತಡೇ ಬಟ್ಟೆ ಖರೀದಿಸಲು ಹೋಗಬೇಕು ಎಂಬುದು ನೆನಪಿದೆಯಲ್ಲವೇ? ಎಂದು ಜೋರಾಗಿ ಆಕೆಯ ಭುಜವನ್ನು ತಟ್ಟಿ ಕೇಳಿದನು. ಗಂಡನ ಮಾತಿಗೆ ಸ್ವಲ್ಪ ಗಲಿಬಿಲಿಗೊಂಡರೂ ಪ್ರಿಯಾ ಸಂಭಾಳಿಸಿಕೊಂಡು ಇಂದು ಸಂಜೆಯೇ ತಂದು ಬಿಡೋಣ ಎಂದು ಉತ್ತರಿಸಿದಳು. ಕೂಡಲೇ ಪ್ರಿಯಾಳ ಪಕ್ಕ ಕುಳಿತಿದ್ದ ವ್ಯಕ್ತಿ ಹಿಂತಿರುಗಿ ಪ್ರವೀಣನನ್ನು ನೋಡಿ ಯಾರಿವರು? ಎಂಬಂತೆ ಪ್ರಿಯಾಳಿಗೆ ಸನ್ನೆ ಮಾಡಿ ಕೇಳಿದನು. ಕೂಡಲೇ ಪ್ರಿಯಾ ಆತ ತನ್ನ ಪತಿ ಎಂದು ಪರಿಚಯಿಸಿದಳು. ಕೊಂಚ ಸಲುಗೆಯಿಂದಲೇ ಪ್ರಿಯಾಳೊಂದಿಗೆ ವ್ಯವಹರಿಸುತ್ತಿದ್ದ ಆಕೆಯ ಪಕ್ಕ ಕುಳಿತ ವ್ಯಕ್ತಿ ಇದರಿಂದ ತುಸು ಕಕ್ಕಾಬಿಕ್ಕಿಯಾದನು. ಕೆಲವೇ ನಿಮಿಷಗಳಲ್ಲಿ ಬಸ್ಸು ಸ್ಟಾಪಿಗೆ ಬಂದು ನಿಲ್ಲುತ್ತಲೇ ಎದ್ದು ನಿಂತ ಪ್ರವೀಣ್ ಪ್ರಿಯಾಳ ಕೈ ಹಿಡಿದು ಬಸ್ಸಿನಿಂದ ಕೆಳಗಿಳಿಯುತ್ತಲೇ ಆ ಪಕ್ಕದ ವ್ಯಕ್ತಿಗೆ ಬಾಯ್ ಹೇಳಿದನು.

ಬಸ್ಸು ಮುಂದೆ ಹೋದ ಕೂಡಲೇ ಬಸ್ ಸ್ಟಾಪಿನ ಒಂದು ಮೂಲೆಯಲ್ಲಿ ನಿಂತು ಒಂದೇ ಸಮನೆ ಜೋರಾಗಿ ನಕ್ಕಳು ಪ್ರಿಯಾ. ಆಕೆಯ ನಗುವಿನಲ್ಲಿ ಕಳೆದುಹೋದ ಪ್ರವೀಣ. ನಕ್ಕು ಸಾಕಾದ ಮೇಲೆ "ಪ್ರವೀಣ್, ಈ ಸಾನ್ವಿ ಯಾರು? ಎಂದು ಕೇಳಿದಳು ಪ್ರಿಯಾ!. ಕೂಡಲೇ ನಸುನಗುತ್ತಾ ಪ್ರವೀಣ ನಮಗೆ ಮುಂದೆ ಹುಟ್ಟುವ ಮಗುವಿನ ಹೆಸರು ಸಾನ್ವಿ ಎಂದು ಹೇಳಿದನು. ಮತ್ತೊಮ್ಮೆ ಜೋರಾಗಿ ಇಬ್ಬರು ನಕ್ಕು ಕೈ ಕೈ ಹಿಡಿದುಕೊಂಡು ಬೇರೊಂದು ಬಸ್ಸನ್ನು ಹತ್ತಿ ತಮ್ಮ ಗಮ್ಯದತ್ತ ತೆರಳಿದರು.

**-ವೀಣಾ ಹೇಮಂತಗೌಡ ಪಾಟೀಲ್,**
ಮುಂಡರಗಿ.

## ಅಡವಿಸೋಮಾಪೂರ ಸರಕಾರಿ ಪ್ರೌಢಶಾಲೆಯ ಶೇ. 96.66ರಷ್ಟು ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಡವಿಸೋಮಾಪೂರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ 2023-2024ನೇ ಸಾಲಿನ ಎಸ್.ಎಸ್.ಎಲ್.ಸಿ. ಫಲಿತಾಂಶ ಶೇ. 96.66 ರಷ್ಟು ಆಗಿದೆ. ಕುಮಾರಿ ಕವಿತಾ ಜಗದೀಶ ಜಡಿ 588 (94.08%) ಶಾಲೆಗೆ ಪ್ರಥಮ ಸ್ಥಾನ ಗಳಿಸಿದ್ದಾಳೆ. ಕುಮಾರಿ ಬಿಬಿ ಆಯಿಸಾ ಮೌಲಾಸಾಬ ಪೆಂಡಾರಿ 520 (ಶೇ 83.2%), ಅಂಕಗಳಿಸಿ ದ್ವಿತೀಯ ಸ್ಥಾನ, ಕವಿತಾ ಬಸವರಾಜ ಹಾದಿಮನಿ 516 (ಶೇ. 82.56%) ಅಂಕಗಳಿಸಿ ತೃತೀಯ ಸ್ಥಾನ ಪಡೆದಿದ್ದಾಳೆ ಎಂದು ಶಾಲೆಯ ಪ್ರಕಟಣೆಯಲ್ಲಿ ತಿಳಿಸಿಲಾಗಿದೆ.

ವಿದ್ಯಾರ್ಥಿನಿಂಯರ ಸಾಧನೆಗೆ ಶಾಲೆಯ ಮುಖ್ಯೋಪಾಧ್ಯಾಯರಾದ ಸಿ. ಎಂ. ಪತ್ತಾರ ಹಾಗೂ ಸಹಶಿಕ್ಷಕರು, ಶಿಕ್ಷಕಿಯರು, ಸಿಬ್ಬಂದಿ ವರ್ಗ ಹರ್ಷ ವ್ಯಕ್ತಪಡಿಸಿದೆ.




ಗದಗ: ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಎಂ. ಆರ್. ಡೊಳ್ಳಿನ, ಸಮಸ್ತ ಶಿಕ್ಷಕ/ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

**ಬಸವ ಜಯಂತಿ ನಿಮಿತ್ತ 'ಮಾನವತಾವಾದಿ ಬಸವೇಶ್ವರ' ಪ್ರಶಸ್ತಿ ಪ್ರದಾನ-ಡಾ.ಪುಟ್ಟರಾಜ ಗವಾಯಿಗಳ ಉಚಿತ ಸಂಗೀತ ಪಾಠಶಾಲೆಗೆ ಪ್ರಶಸ್ತಿ**

## ರಾಗ-ದ್ವೇಷಗಳಿಲ್ಲದ ಸಮಾಜ ನಿರ್ಮಾಣಕ್ಕೆ ಬಸವತತ್ವಗಳು ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಗದಗ

ಶಿವಮೊಗ್ಗದ ಡಾ.ಪುಟ್ಟರಾಜ ಗವಾಯಿಗಳ ಉಚಿತ ಸಂಗೀತ ಹಾಗೂ ಸಂಸ್ಕೃತ ಪಾಠಶಾಲೆಗೆ 'ಮಾನವತಾವಾದಿ ಬಸವೇಶ್ವರ' ಪ್ರಶಸ್ತಿ ನೀಡಿರುವ ಲಕ್ಷ್ಮೇಶ್ವರದ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಕಾರ್ಯ ಅಭಿನಂದನೀಯ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಡಿ.ವಿ ಪರಮಶಿವಮೂರ್ತಿ ನುಡಿದರು.

ಅವರು ನಗರದ ತೋಂಟದಾರ್ಯ ಮಠದಲ್ಲಿ ಬಸವ ಜಯಂತಿ ಅಂಗವಾಗಿ ಲಕ್ಷ್ಮೇಶ್ವರದ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ವತಿಯಿಂದ 'ಮಾನವತಾವಾದಿ ಬಸವೇಶ್ವರ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿವಮೊಗ್ಗದ ಡಾ.ಪುಟ್ಟರಾಜ ಗವಾಯಿಗಳ ಉಚಿತ ಸಂಗೀತ ಹಾಗೂ ಸಂಸ್ಕೃತ ಪಾಠಶಾಲೆಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ಬಸವ ಜಯಂತಿ ದಿನದಂದು ತೋಂಟದಾರ್ಯ ಮಠದಲ್ಲಿ ಬಸವಣ್ಣನಿಗೆ ಪ್ರಿಯವಾದ ಶ್ರಮಜೀವಿಗಳಿಗೆ ಸನ್ಮಾನ ಹಾಗೂ ಜ್ಞಾನದಾಸೋಹದಂಥ ಸತ್ಕಾರ್ಯಗಳು ನಡೆದಿರುವುದು ವಿಶೇಷವಾಗಿದ್ದು, ವಿಜಯನಗರದ ಪ್ರಸಿದ್ಧ ದೊರೆ ಪ್ರೌಢದೇವರಾಯನ ಕಾಲದಲ್ಲಿ ಕನ್ನಡ ಸಾಹಿತ್ಯದ ಸ್ಥಿತಿಗತಿಗಳ ಕುರಿತು ವಿವರಣೆ ನೀಡುವ ಅಪರೂಪದ ಕೃತಿ ಬಿಡುಗಡೆಯಾಗಿರುವುದು ಸಂತಸದ ಸಂಗತಿ. ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳೇ ಈ ಕೃತಿಯ ಪರಿಷ್ಕರಣೆ ಕಾರ್ಯ ಮಾಡಿರುವುದು ಅವರ ಸಾಹಿತ್ಯ ಕಾಳಜಿಗೆ ಹಿಡಿದ ಕೈಗನ್ನಡಿಯಾಗಿದೆ ಎಂದರು.



ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷರಾದ ಪ್ರಕಾಶ ಲಿಂಬಯ್ಯಸ್ವಾಮಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಶಿವಮೊಗ್ಗದ ಡಾ.ಪುಟ್ಟರಾಜ ಕವಿ ಗವಾಯಿಗಳ ಉಚಿತ ಸಂಗೀತ ಮತ್ತು ಸಂಸ್ಕೃತ ಪಾಠಶಾಲೆಯ ಸಂಸ್ಥಾಪಕರಾದ ಆರ್.ಬಿ ಸಂಗಮೇಶ್ವರ ಗವಾಯಿಗಳು ಮಾತನಾಡಿ, ತಾವು ಪುಟ್ಟರಾಜ ಗವಾಯಿಗಳ ಪ್ರೇರಣೆಯಿಂದ ಆಶ್ರಮ ಸ್ಥಾಪಿಸಿದ ಬಗೆಯನ್ನು ಕುರಿತು ವಿವರಿಸಿದರು.

ಡಾ.ಶಿವಾನಂದ ವಿರಕ್ತಮಠ ರಚಿಸಿದ 'ಪ್ರೌಢದೇವರಾಯನ ಕಾಲದ ಕನ್ನಡ ಸಾಹಿತ್ಯ' ಲೋಕಾರ್ಪಣೆಗೊಂಡಿತು. ಹಂಪಿ ಕನ್ನಡ ವಿಶ್ವವಿದ್ಯಾಯದ ಹಸ್ತಪ್ರತಿ ವಿಭಾಗದ ಮುಖ್ಯಸ್ಥರಾದ ಡಾ.ಕೆ ರವೀಂದ್ರನಾಥ ಗ್ರಂಥ ಲೋಕಾರ್ಪಣೆ ಮಾಡಿ ಗ್ರಂಥದ ವೈಶಿಷ್ಟ್ಯಗಳ ಕುರಿತು ಮಾತನಾಡಿದರು.

ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ರೇವಣಸಿದ್ಧಯ್ಯ ಮರಿದೇವರಮಠ ಹಾಗೂ ಡಾ.ಪುಟ್ಟರಾಜ ಕವಿ ಗವಾಯಿಗಳ ಉಚಿತ ಸಂಗೀತ ಮತ್ತು ಸಂಸ್ಕೃತ ಪಾಠಶಾಲೆಯ ಅಂಧ ವಿದ್ಯಾರ್ಥಿಗಳಿಂದ ಸಂಗೀತ ಸೇವೆ ನೆರವೇರಿತು.

> ಮಾನವಕುಲವನ್ನು ಕಾಡುತ್ತಿರುವ ಸಮಕಾಲೀನ ಸಮಸ್ಯೆಗಳಿಗೆ ಬಸವತತ್ವವು ಎಳೆ ಎಳೆಯಾಗಿ ಪರಿಹಾರ ಸೂಚಿಸಿದ್ದು, ಬಸವತತ್ವವವನ್ನು ಅಧ್ಯಯನ ಮಾಡುವ ವ್ಯವಧಾನ ನಮ್ಮಲ್ಲಿ ಇಲ್ಲವಾಗಿದೆ. ರಾಗ-ದ್ವೇಷಗಳಿಲ್ಲದ ಸಮಾಜ ನಿರ್ಮಾಣವಾಗಬೇಕಾದರೆ ಬಸವತತ್ವಗಳು ಅತ್ಯವಶ್ಯವಾಗಿವೆ.
> -ಡಾ.ಡಿ.ವಿ ಪರಮಶಿವಮೂರ್ತಿ, ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳು.

ಸಿ.ಪಿ.ಐ ಹಾಗೂ ಸಾಹಿತಿಗಳಾದ ಜ್ಯೋತಿರ್ಲಿಂಗ ಹೊನಕಟ್ಟಿ, ಆನಂದಸ್ವಾಮಿ ಗಡ್ಡದ್ದೇವರಮಠ, ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷರಾದ ಕೆ.ಎಚ್ ಬೇಲೂರ, ಕಾರ್ಯದರ್ಶಿಗಳಾದ ಪ್ರವೀಣ ವಾರಕರ, ಉಪಾಧ್ಯಕ್ಷರಾದ ಶ್ರೀದೇವಿ ಶೆಟ್ಟರ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಶೇಖಣ್ಣ ಕಳಸಾಪೂರ, ಅಮರೇಶ ಅಂಗಡಿ ಮುಂತಾದವರಿದ್ದರು.

## ಛತ್ತೀಸ್‌ಗಢ ಭದ್ರತಾ ಪಡೆಗಳಿಂದ ಜಂಟಿ ಕಾರ್ಯಾಚರಣೆ; 12 ಮಾವೋವಾದಿಗಳ ಹತ್ಯೆ



■ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ

ಛತ್ತೀಸ್‌ಗಢದ ಕಂಕೇರ್ ಜಿಲ್ಲೆಯಲ್ಲಿ ನಡೆದ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ 12 ಮಾವೋವಾದಿಗಳನ್ನು ಭದ್ರತಾ ಪಡೆಗಳು ಹತ್ಯೆ ಮಾಡಿದೆ.

ಗಂಗಲೂರ್ ಪೊಲೀಸ್ ಠಾಣಾ ವ್ಯಾಪ್ತಿಯ ಪಿಡಿಯಾ ಗ್ರಾಮದ ಸಮೀಪದಲ್ಲಿರುವ ಅರಣ್ಯ ಪ್ರದೇಶದಲ್ಲಿ ಭಾರೀ ಸಂಖ್ಯೆಯಲ್ಲಿ ಭದ್ರತಾ ಸಿಬ್ಬಂದಿಗಳು ನಕ್ಸಲ್ ವಿರೋಧಿ ಕಾರ್ಯಾಚರಣೆ ನಡೆಸಿದ್ದು, ಗುಂಡಿನ ಕಾಳಗ ನಡೆದ ಸ್ಥಳದಲ್ಲಿ ಈವರೆಗೆ 12 ಮಾವೋವಾದಿಗಳ ಮೃತದೇಹಗಳು ಪತ್ತೆಯಾಗಿವೆ ಎಂದು ತಿಳಿದು ಬಂದಿದೆ.

ಇದಲ್ಲದೆ ಐಇಡಿ ಸ್ಫೋಟದಲ್ಲಿ ಜಿಲ್ಲಾ ಮೀಸಲು ಗಾರ್ಡ್ (ಡಿಆರ್‌ಜಿ) ಯೋಧ ಗಾಯಗೊಂಡಿದ್ದಾರೆ. ಛತ್ತೀಸ್‌ಗಢದಲ್ಲಿ ಈ ವರ್ಷ ಕೊಲ್ಲಲ್ಪಟ್ಟ ಮಾವೋವಾದಿಗಳ ಸಂಖ್ಯೆ ಈಗ 103ಕ್ಕೆ ಏರಿಕೆಯಾಗಿದೆ. ಇದು 2019ರಿಂದ ಅತ್ಯಧಿಕವಾಗಿದೆ.

ಮಾವೋವಾದಿಗಳ ಭದ್ರಕೋಟೆ ಎಂದು ಪರಿಗಣಿಸಲಾಗಿರುವ ಪಿಡಿಯಾ ಪೊಲೀಸ್ ಠಾಣಾ ವ್ಯಾಪ್ತಿಯ ಗಂಗಲೂರು ಪ್ರದೇಶದಲ್ಲಿ ಘಟನೆ ನಡೆದಿದೆ. ಇದು ಒಂದೇ ವಾರಗಳಲ್ಲಿ ಗಂಗಲೂರಿನಲ್ಲಿ ನಡೆದ ಎರಡನೇ ಪ್ರಮುಖ ಎನ್‌ಕೌಂಟರ್ ಆಗಿತ್ತು. ಏಪ್ರಿಲ್ 2ರಂದು ಈ ಪ್ರದೇಶದಲ್ಲಿ 13 ಮಾವೋವಾದಿಗಳನ್ನು ಹತ್ಯೆ ಮಾಡಲಾಗಿತ್ತು.

ಪಿಡಿಯಾ ಅರಣ್ಯದಲ್ಲಿ ಸುಮಾರು 150 ಮಾವೋವಾದಿಗಳು ಇರುವ ಬಗ್ಗೆ ಮಾಹಿತಿ ಸಿಕ್ಕಿದೆ. ಮಾವೋವಾದಿಗಳು ಪಶ್ಚಿಮ ಬಸ್ತಾರ್ ವಿಭಾಗ, ದರ್ಭಾ ವಿಭಾಗ, ಪೀಪಲ್ಸ್ ಲಿಬರೇಶನ್ ಗೆರಿಲ್ಲಾ ಆರ್ಮಿ (ಪಿಜಿಎಲ್‌ಎ) ಕಂಪನಿ 2ರ ಕಮಾಂಡರ್ ವೆಲ್ಲಾಗೆ ಸೇರಿದವರಾಗಿದ್ದರು ಎಂದು ಬಿಜಾಪುರ ಎಸ್ಪಿ ಜಿತೇಂದ್ರ ಕುಮಾರ್ ಯಾದವ್ ತಿಳಿಸಿದ್ದಾರೆ.

## ದ್ವೇಷ ಭಾಷಣ: ಬಿಜೆಪಿ ನಾಯಕಿ ನವನಿತ್ ರಾಣಾ ವಿರುದ್ಧ ಎಫ್‌ಐಆರ್



■ವಿಜಯಸಾಕ್ಷಿ ಸುದ್ದಿ, ಶಾದ್‌ನಗರ

ಚುನಾವಣಾ ಪ್ರಚಾರದಲ್ಲಿ ದ್ವೇಷದ ಭಾಷಣ ಮಾಡಿರುವ ಹಿನ್ನೆಲೆ ಮಾದರಿ ನೀತಿ ಸಂಹಿತೆ (ಎಂಸಿಸಿ) ಉಲ್ಲಂಘಿಸಿದ ಆರೋಪದಲ್ಲಿ ಸೈಬರಾಬಾದ್ ಪೊಲೀಸರು ಬಿಜೆಪಿ ನಾಯಕಿ ನವನಿತ್ ರಾಣಾ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಶಾದ್‌ನಗರ ಪ್ರದೇಶದಲ್ಲಿ ನಡೆದ ಸಭೆಯೊಂದರಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನವನಿತ್ ರಾಣಾ, 'ಕಾಂಗ್ರೆಸ್‌ಗೆ ಮತ ಹಾಕುವುದು ಎಂದರೆ ಪಾಕಿಸ್ತಾನಕ್ಕೆ ಮತ ಹಾಕುವುದು' ಎಂದು ಪ್ರಚೋದನಾಕಾರಿಯಾಗಿ ಹೇಳಿಕೆ ನೀಡಿದ್ದಾರೆ.

ಶಾದ್‌ನಗರ ಪೊಲೀಸ್ ಠಾಣೆಯಲ್ಲಿ ಈ ಕುರಿತು ಫ್ಲೈಯಿಂಗ್ ಸರ್ವಲೆನ್ಸ್ ಟೀಮ್ (ಎಫ್‌ಎಸ್‌ಟಿ) ಅಧಿಕಾರಿಯೊಬ್ಬರು ದೂರು ದಾಖಲಿಸಿದ್ದು, ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿರುವ ಬಗ್ಗೆ ನವನೀತ್ ರಾಣಾ ವಿರುದ್ಧ ಭಾರತೀಯ ದಂಡ ಸಂಹಿತೆಯ ಖಕಅ ಸೆಕ್ಷನ್ 171-ಸಿ (ಸುಳ್ಳು ಹೇಳಿಕೆಗಳು), 171-ಜಿ (ಚುನಾವಣೆಗಳ ಮೇಲೆ ಪ್ರಭಾವ ಬೀರುವುದು) ಮತ್ತು 188ರಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.


ಮೇ.9ರಂದು ಸರೂರ್‌ನಗರದಲ್ಲಿ ಚುನಾವಣಾ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಇತ್ತೀಚೆಗೆ ರಾಜ್ಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಉದ್ರೇಕಕಾರಿ ಹೇಳಿಕೆಗಳನ್ನು ನೀಡಿದ ನವನಿತ್ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಚುನಾವಣಾ ಆಯೋಗವನ್ನು (ಇಸಿಐ) ಒತ್ತಾಯಿಸಿದ್ದರು. ಇದು ಗಂಭೀರ ಅಪರಾಧ, ದೇಶದ ಕೋಟ್ಯಂತರ ಜನರನ್ನು ಗುರಿಯಾಗಿಸಿಕೊಂಡು ಹೇಳಿಕೆ ನೀಡಿದ್ದಕ್ಕೆ ಪ್ರಧಾನಿ ಮೋದಿ ಮತ್ತು ಕೇಂದ್ರ ಸಚಿವ ಅಮಿತ್ ಶಾ ಅವರು ನವನಿತ್ ರಾಣಾ ವಿರುದ್ಧ ಕ್ರಮವನ್ನು ಕೈಗೊಳ್ಳುತ್ತಾರಾ ಎಂದು ಪ್ರಶ್ನಿಸಿದ್ದರು.

## ಮುಸ್ಲಿಂ ಜನಸಂಖ್ಯೆ ತೋರಿಸಲು ಪಾಕಿಸ್ತಾನದ ಧ್ವಜ ಬಳಸಿದ 'ಸುವರ್ಣ ನ್ಯೂಸ್'!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಸ್ಲಿಂ ಜನಸಂಖ್ಯೆ ತೋರಿಸಲು ಸುವರ್ಣ ನ್ಯೂಸ್ ಪಾಕಿಸ್ತಾನ ಧ್ವಜದ ಗ್ರಾಫಿಕ್ಸ್ ಬಳಸಿದ್ದು, ಭಾರೀ ಜನಾಕ್ರೋಶಕ್ಕೆ ಕಾರಣವಾಗಿದೆ.

ಪ್ರಧಾನ ಮಂತ್ರಿಗಳ ಆರ್ಥಿಕ ಸಲಹಾ ಮಂಡಳಿ ಬಿಡುಗಡೆ ಮಾಡಿರುವ ಜನಸಂಖ್ಯಾ ವರದಿ ದೇಶದಲ್ಲಿ ಹಿಂದೂಗಳ ಜನ ಸಂಖ್ಯೆ ಇಳಿಕೆಯಾಗಿದೆ. ಮುಸ್ಲಿಮರ ಜನಸಂಖ್ಯೆ ಭಾರೀ ಪ್ರಮಾಣದಲ್ಲಿ ಏರಿಕೆಯಾಗಿದೆ ಎಂದು ತಿಳಿಸಿತ್ತು. ಚುನಾವಣೆಯ ಹೊತ್ತಲ್ಲೇ ಬಿಡುಗಡೆ ಮಾಡಿರುವ ವರದಿ ದೇಶದಾದ್ಯಂತ ವಿವಾದದ ಕಿಡಿ ಹೊತ್ತಿಸಿದೆ.




ಈ ವರದಿ ಆಧರಿಸಿ ಮೇ 9, 2024ರಂದು ರಾತ್ರಿ 8:30ಕ್ಕೆ ಸುವರ್ಣ ನ್ಯೂಸ್ ಸುದ್ದಿ ಪ್ರಕಟಿಸಿತ್ತು. ಅಜಿತ್ ಹನುಮಕ್ಕನವರ್ ಸುದ್ದಿ ವಿಶ್ಲೇಷಣೆ ಮಾಡಿದ್ದರು. ಸುದ್ದಿಯಲ್ಲಿ ಹಿಂದೂ ಮುಸ್ಲಿಮರ ಜನಸಂಖ್ಯೆ ತೋರಿಸುವಾಗ ಹಿಂದೂಗಳ ಜನಸಂಖ್ಯೆಗೆ ಭಾರತದ ಧ್ವಜ ಮತ್ತು ಮುಸ್ಲಿಮರ ಜನಸಂಖ್ಯೆಗೆ ಪಾಕಿಸ್ತಾನ ಧ್ವಜದ ಗ್ರಾಫಿಕ್ಸ್ ಬಳಸಲಾಗಿದೆ.

ಇದರ ವಿಡಿಯೋ ಹಾಗೂ ಸ್ಕ್ರೀನ್‌ಶಾಟ್‌ನ ವಿಡಿಯೋವನ್ನು ಆಲ್ಟ್‌ನ್ಯೂಸ್‌ನ ಸಹ ಸಂಸ್ಥಾಪಕ ಹಾಗೂ ಪತ್ರಕರ್ತ ಮುಹಮ್ಮದ್ ಝುಬೈರ್ ತನ್ನ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಆ ಬಳಿಕ ವಿಷಯ ಬಹಿರಂಗಗೊಂಡಿದೆ.

"ಭಾರತೀಯ ಹಿಂದೂಗಳಿಗೆ ಭಾರತದ ಧ್ವಜ ಮತ್ತು ಭಾರತೀಯ ಮುಸ್ಲಿಮರಿಗೆ ಪಾಕಿಸ್ತಾನದ ಧ್ವಜ ಬಳಸಲಾಗಿದೆ. ಏಷ್ಯಾನೆಟ್ ಸುವರ್ಣ ನ್ಯೂಸ್ ಕನ್ನಡ ಮತ್ತು ಅದರ ಆ್ಯಂಕರ್ ಅಜಿತ್ ಹನುಮಕ್ಕನವರ್ ಪ್ರಧಾನ ಮಂತ್ರಿಗಳ ಆರ್ಥಿಕ ಸಲಹಾ ಮಂಡಳಿಯ ವರದಿಯನ್ನು ಚರ್ಚಿಸುವಾಗ 20 ಕೋಟಿ ಭಾರತೀಯ ಮುಸ್ಲಿಮರನ್ನು ಪಾಕಿಸ್ತಾನದ ಧ್ವಜ ಬಳಸಿ ಚಿತ್ರಿಸಿದ್ದಾರೆ. ಕರ್ನಾಟಕದ ಸಂಘಟನೆಗಳು ಆ್ಯಂಕರ್ ಮತ್ತು ಚಾನೆಲ್ ವಿರುದ್ಧ ದೂರು ದಾಖಲಿಸುತ್ತವೆ ಎಂದುಕೊಂಡಿದ್ದೇನೆ" ಎಂದು ಝುಬೈರ್ ತನ್ನ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದರು.

## ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ ಶೇ. 100 ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ ಫಲಿತಾಂಶ ಶೇ.100 ರಷ್ಟಾಗಿದ್ದು, ಚೇತನಾ ಬೇವಿನಕಟ್ಟಿ (ಶೇ.90.88), ಮಧುಶ್ರೀ ಬಿಲಕೇರಿ (ಶೇ.90.88), ಐಶ್ವರ್ಯ ಓದುಸುಮಠ (ಶೇ.90.08), ಶ್ರೇಯಾ ಬಿಸನಳ್ಳಿ (ಶೇ.89.76) ಅಂಕ ಗಳಿಸಿದ್ದಾರೆ. ಶಾಲೆಯ ಒಟ್ಟು 51 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. 07 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 29 ಪ್ರಥಮ ಶ್ರೇಣಿ, 10 ದ್ವಿತೀಯ ಶ್ರೇಣಿಯಲ್ಲಿ 5 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಎಂದು ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್.ಎಸ್.ಎಲ್.ಸಿ. ಪರೀಕ್ಷೆ ಫಲಿತಾಂಶ

## ಬಸವೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿ ಪುವದ ತಿರುಚನಾಪಲ್ಲಿ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬಸವೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ವಿದ್ಯಾರ್ಥಿ ಪುವದ ಮಮ್ಮದಹುಸೇನ ತಿರುಚನಾಪಲ್ಲಿ 2023–24ನೇ ಸಾಲಿನ ಎಸ್.ಎಸ್.ಎಲ್.ಸಿ. ಫಲಿತಾಂಶದಲ್ಲಿ ಶೇ. 81.9% ಅಂಕಗಳಿಸಿ ಶಾಲೆಗೆ ಕೀರ್ತಿ ತಂದಿದ್ದು, ಪಾಲಕರು ಹಾಗೂ ಬಂಧು–ಬಳಗದವರು ಅಭಿನಂದಿಸಿದ್ದಾರೆ.

## ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಫಹೀಮುದ್ದೀನ ಮುಜಾವರ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಯಲ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿ ಫಹೀಮುದ್ದೀನ ಅಬ್ದುಲರೆಹಮಾನ ಮುಜಾವರ 2023–24ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಫಲಿತಾಂಶದಲ್ಲಿ ಶೇ. 89.6% ಅಂಕಗಳಿಸಿ ಶಾಲೆಗೆ ಕೀರ್ತಿ ತಂದಿದ್ದು,

ಪಾಲಕರು ಹಾಗೂ ಬಂಧು–ಬಳಗದವರು ವಿದ್ಯಾರ್ಥಿ ಫಹೀಮುದ್ದೀನನ್ನು ಅಭಿನಂದಿಸಿದ್ದಾರೆ.

## ಪ್ರಧಾನಿ ಸೋಲಿನ ಭೀತಿಯಲ್ಲಿ ಹತಾಶರಾಗಿದ್ದಾರೆ, ಮೇಲಕ್ಕೆ ಏರಿದವರು ಕೆಳಕ್ಕೆ ಇಳಿಯಲೇಬೇಕು: ಸಿದ್ಧರಾಮಯ್ಯ

■ ವಿಜಯಸಾಕ್ಷಿ ಸುದ್ದಿ, ಮೈಸೂರು



ಪ್ರಧಾನಿ ನರೇಂದ್ರ ಮೋದಿ ಸೋಲಿನ ಭೀತಿಯಲ್ಲಿ ಹತಾಶರಾಗಿದ್ದಾರೆ. ಹೀಗಾಗಿ ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ. ಜನರನ್ನು ಭಾವನಾತ್ಮಕವಾಗಿ ಕೆರಳಿಸುವ ಯತ್ನ ನಡೆಸುತ್ತಿದ್ದಾರೆ. ಮೇಲಕ್ಕೆ ಏರಿದವರು ಕೆಳಕ್ಕೆ ಇಳಿಯಬೇಕಲ್ಲವೇ? ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಪ್ರಶ್ನಿಸಿದ್ದಾರೆ.

ಮೈಸೂರಿನಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುವ ಸಂದರ್ಭದಲ್ಲಿ ಪ್ರತಿಪಕ್ಷಗಳು ನನ್ನನ್ನು ಸಮಾಧಿ ಮಾಡಲು ಯತ್ನಿಸುತ್ತಿವೆ ಎಂಬ ಮೋದಿ ಹೇಳಿಕೆಗೆ ಅವರು ಪ್ರತಿಕ್ರಿಯೆ ನೀಡಿದರು.

ಯಾರೂ ಯಾರನ್ನೂ ಸಮಾಧಿ ಮಾಡಲು ಸಾಧ್ಯವಿಲ್ಲ. ನಮ್ಮ ಹೋರಾಟವೇನಿದ್ದರೂ ರಾಜಕೀಯವಾದದ್ದು, ವೈಯಕ್ತಿಕವಲ್ಲ. ನರೇಂದ್ರ ಮೋದಿಯವರನ್ನು ನಾವು ರಾಜಕೀಯವಾಗಿ ವಿರೋಧಿಸುತ್ತೇವೆ ಎಂದು ಅವರು ಹೇಳಿದರು.

ನರೇಂದ್ರ ಮೋದಿ ಕಳೆದ ಹತ್ತು ವರ್ಷಗಳಿಂದ ಬಡವರ ಪರವಾಗಿ ಯಾವುದೇ ಕೆಲಸ ಮಾಡಲಿಲ್ಲ. ಅವರು ಈಗಾಗಲೇ ಸುಳ್ಳಿನ ಸರದಾರ ಎಂದು ಹೆಸರಾಗಿದ್ದಾರೆ. ಹೀಗಾಗಿ ಅವರು ಜನರನ್ನು ಭಾವನಾತ್ಮಕವಾಗಿ ಕೆರಳಿಸುವ ಯತ್ನ ನಡೆಸುತ್ತಿದ್ದಾರೆ. ಆದರೆ ಇದು ಫಲಪ್ರದವಾಗುವುದಿಲ್ಲ. ನರೇಂದ್ರ ಮೋದಿ ಸುಳ್ಳುಗಳನ್ನು ಹೇಳುತ್ತಾರೆ ಎಂಬುದು ಜನರಿಗೆ ಅರ್ಥ ಆಗಿದೆ ಎಂದು ಅವರು ಹೇಳಿದರು.

## ಕೊಡಗು ಬಾಲಕಿಯ ರುಂಡ ಕೊನೆಗೂ ಪತ್ತೆ



■ ವಿಜಯಸಾಕ್ಷಿ ಸುದ್ದಿ, ಸೋಮವಾರಪೇಟೆ (ಕೊಡಗು)

ಎಸ್ ಎಸ್ ಎಲ್ ಸಿ ವಿದ್ಯಾರ್ಥಿನಿಯ ಭೀಕರ ಹತ್ಯೆಯ ನಂತರ ಕೊನೆಗೂ ಆಕೆಯ ರುಂಡ ಪತ್ತೆಯಾಗಿದೆ.

ಮದುವೆ ರದ್ದಾದ ಹಿನ್ನೆಲೆಯಲ್ಲಿ ಆರೋಪಿ ಪ್ರಕಾಶ್ ಬಾಲಕಿ ಮೀನಾಳ ರುಂಡ ಮುಂಡ ಬೇರೆ ಮಾಡಿ ಕೊಂದುಹಾಕಿದ್ದ. ರುಂಡವನ್ನು ತಾನೇ ಹೊತ್ತೊಯ್ದಿದ್ದ. ಇದೀಗ ಆಕೆಯ ರುಂಡ ಮರವೊಂದರ ಬಳಿ ಪತ್ತೆಯಾಗಿದೆ.

ಬಾಲಕಿಯ ತಲೆಯ ಜೊತೆಗೆ ಆಕೆಯ ಚಪ್ಪಲಿಯನ್ನೂ ಆತ ಕೊಂಡೊಯ್ದಿದ್ದ. ಇದೀಗ ತಲೆ ಮತ್ತು ಚಪ್ಪಲಿಯನ್ನ ಪೊಲೀಸರು ವಶಕ್ಕೆ ಪಡೆದು ತನಿಖೆ ಮುಂದುವರೆಸಿದ್ದಾರೆ.

ಕೊಲೆಗಡುಕ ಪ್ರಕಾಶ್ ಈಗಾಗಲೇ ಪೊಲೀಸರ ವಶದಲ್ಲಿದ್ದು, ಆತನ ವಿಚಾರಣೆ ನಡೆಸಿದ ನಂತರ ರುಂಡ ಪತ್ತೆಯಾಗಿದೆ.

ಸೋಮವಾರಪೇಟೆ ತಾಲ್ಲೂಕಿನ ಹಮ್ಮಿಯಾಲದ ಬೆಟ್ಟವೊಂದರ ಬಳಿ ಕ್ರೂರಿ ಪ್ರಕಾಶ್ ಅವಿತು ಕುಳಿತಿದ್ದ. ಆತನನ್ನು ಸೋಮವಾರಪೇಟೆ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದರು.

### ಬಣಜಿಗ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಎಫ್. ಎನ್. ಹುಡೇದ

# ಲಿಂಗ ತಾರತಮ್ಯವನ್ನು ಮೊದಲು ವಿರೋಧಿಸಿದವರು ಬಸವಣ್ಣನವರು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಸವಣ್ಣ ಕ್ರಾಂತಿಕಾರಿ ವಿಚಾರದ ವ್ಯಕ್ತಿ. ಜಗತ್ತಿನಲ್ಲಿ ಸಮಾನತೆಯನ್ನು ಸ್ಥಾಪಿಸಲು ಶ್ರಮಿಸಿದ ಶಕ್ತಿ. ಜಗತ್ತಿನಲ್ಲಿರುವ ಲಿಂಗ ತಾರತಮ್ಯವನ್ನು ಮೊದಲು ವಿರೋಧಿಸಿದ ವ್ಯಕ್ತಿ ಬಸವಣ್ಣನವರು ಜಗತ್ತಿಗೇ ಜ್ಯೋತಿಯಾದವರು ಎಂದು ನರೇಗಲ್ಲ ಎಸ್. ಎ. ಪ.ಪೂ ಮಹಾವಿದ್ಯಾಲಯದ ಉಪನ್ಯಾಸಕ ಎಫ್. ಎನ್. ಹುಡೇದ ಹೇಳಿದರು.

ಪಟ್ಟಣದ ಬಸವರಾಜ ಜಕ್ಕಲಿಯವರ ಮನೆಯಲ್ಲಿ ಬಣಜಿಗ ಕ್ಷೇಮಾಭಿವೃದ್ಧಿ ಸಂಘದವರು ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಂಟು ನೂರು ವರ್ಷಗಳ ಕೆಳಗೆ ಸಮಾಜದಲ್ಲಿ ಅಸಮಾನತೆ ಇತ್ತು. ಅದನ್ನು ತೊಡೆದು ಹಾಕಲು ಅವಿರತವಾಗಿ ಶ್ರಮಿಸಿದವರು ಬಸವಣ್ಣನವರು. ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ವಚನಗಳನ್ನು ನಾವುಗಳು ಪಚನ ಮಾಡಿಕೊಂಡಿದ್ದರೆ ಇಷ್ಟೊತ್ತಿಗಾಗಲೆ ಬಸವಣ್ಣನವರು ಕಂಡ ಸುಂದರ ಸಮಾಜವನ್ನು ನಿರ್ಮಿಸಬಹುದಿತ್ತು. ಆದರೆ ನಾವುಗಳು ಅದರ ಕಡೆಗೆ ಗಮನ ನೀಡುತ್ತಿಲ್ಲವೆಂದು ಅವರು ವಿಷಾದಿಸಿದರು. ಬಸವಣ್ಣನವರ ಆರ್ಥಿಕ ನೀತಿಯು ಎಂದಿಗೂ ಪ್ರಸ್ತುತವಾಗಿದೆ. ಇದನ್ನು ಜಗತ್ತಿನ ಎಲ್ಲ ರಾಷ್ಟ್ರಗಳೂ ಅಳವಡಿಸಿಕೊಂಡರೆ ಆರ್ಥಿಕ ಶಿಸ್ತು ಬರಲು ಸಾಧ್ಯವಾಗುತ್ತದೆ ಎಂದು ಹುಡೇದ ಅಭಿಪ್ರಾಯಪಟ್ಟರು.

ನಿವೃತ್ತ ಉಪನ್ಯಾಸಕ ಡಾ. ಎ. ಕೆ. ನಾಶಿ ಮಾತನಾಡಿ, ಬಸವ ಜಯಂತಿಯ ಒಂದು ದಿನ ಮಾತ್ರ ಬಸವಣ್ಣನವರನ್ನು ನೆನೆಸಿಕೊಂಡರೆ ಸಾಲದು. ನಿತ್ಯದ ವ್ಯವಹಾರಗಳಲ್ಲಿಯೂ ಬಸವಣ್ಣನವರ ತತ್ವಗಳನ್ನು ಅಳವಡಿಸಿಕೊಳ್ಳಲು




ಪ್ರಯತ್ನಿಸಬೇಕು. ಜನರಲ್ಲಿ ಅಂಧಕಾರ ಮತ್ತು ಅಜ್ಞಾನ ಹೋಗಲಾಡಿಸಲು ಬಸವಣ್ಣನವರು ಇನ್ನಿಲ್ಲದ ಪ್ರಯತ್ನ ಮಾಡಿದರು. ಆದರೆ ಇಂದಿಗೂ ಅವು ನಮ್ಮ ಸಮಾಜದಿಂದ ದೂರವಾಗಿಲ್ಲ. ವೈಚಾರಿಕತೆಯ ಕಡೆಗೆ ನಾವು ನಡೆಯಬೇಕು. ಭವಿಗ ಳನ್ನು ಭಕ್ತರನ್ನಾಗಿಸಿದವರು ಬಸವಣ್ಣನವರು. ಗುರು, ಲಿಂಗ, ಜಂಗಮ, ಕಾಯಕ ಮತ್ತು ದಾಸೋಹ ಈ ಐದೂ ತತ್ವಗಳನ್ನು ಬಸವ ಅನುಯಾಯಿಗಳು ಎಂದಿಗೂ ಬಿಡಬಾರದು ಎಂದರು.

ಸಮಾಜದ ಹಿರಿಯರಾದ ಸಿ. ವಿ. ವಂಕಲಕುಂಟಿಯವರು ಮಾತನಾಡಿ ನಮ್ಮಲ್ಲಿನ ಜ್ಞಾನವು ಅನುಷ್ಠಾನಕ್ಕೆ ಬಂದಾಗ ಮಾತ್ರ ಅದರ ಸಿಹಿ ಫಲವನ್ನು ಉಣ್ಣಲು ಸಹಾಯವಾಗುತ್ತದೆ. ಈ ದಿಶೆಯಲ್ಲಿ ನಾವೆಲ್ಲರೂ ಪ್ರಯತ್ನಿಸೋಣ ಎಂದರು. ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಜಿ. ಎ. ಬೆಲ್ಲದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಿ. ಎಂ. ತಿಪ್ಪಶೆಟ್ಟರ, ವೀರಪ್ಪ ವಾಲಿ, ನರೇಶ ಜೋಳದ, ಬಸವರಾಜ ಜೋಳದ, ಕುಬೇರಪ್ಪ ನಾಶಿಪುಡಿ, ಕೆ. ಎಸ್. ಕಳಕಣ್ಣವರ, ಸಕ್ರೆಪ್ಪ ಹಡಪದ, ಎಸ್. ವಿ. ಸಂಕನೂರ, ಅನಿಲ ಗೊಡಚಪ್ಪನವರ, ಶರಣಪ್ಪ ಜೋಳದ, ಬಸವರಾಜ ಅಂಗಡಿ, ಸಿದ್ದನಗೌಡ ಪಾಟೀಲ, ಜಗದೀಶ ರಂಜಣಗಿ, ವೀರಣ್ಣ ಹೊಸಳ್ಳಿ, ಶರಣಪ್ಪ ವಂಕಲಕುಂಟಿ, ಮಹಾಂತೇಶ ಜಕ್ಕಲಿ, ಮಹೇಶ ಕತ್ತಿಶೆಟ್ಟರ, ಅಂದಪ್ಪ ಜಕ್ಕಲಿ, ಬಾಳಪ್ಪ ಶಿಂಧೆ, ಎಸ್. ಸಿ. ಗುಳಗಣ್ಣವರ, ಮುತ್ತಪ್ಪ ಕುಂಬಾರ, ಮಂಡಪ್ಪ ಸಜ್ಜನರ, ಜಗದೀಶ ಜನ್ನು, ಕಳಕಪ್ಪ ಧರ್ಮಾಯತ, ಬಸವರಾಜ ವಂಕಲಕುಂಟಿ, ಶರಣಪ್ಪ ಹಂಜಿ, ರಾಜು ಜೋಳದ, ಪ್ರಶಾಂತ ತಿಪ್ಪಶೆಟ್ಟರ, ಈಶ್ವರಪ್ಪ ಇಳಕಲ್ಲ, ವೀರೇಶ ಬಂಗಾರಶೆಟ್ಟರ, ಅಪ್ಪಣ್ಣ ವಂಕಲಕುಂಟಿ, ವಿಜಯ ಹಂಜಿ, ಸಚಿನ್ ಹಂಜಿ, ಕಾರ್ತಿಕ ಜಕ್ಕಲಿ, ಅಶೋಕಪ್ಪ ಯಾವಗಲ್ಲ, ಶೇಕಣ್ಣ ಯಾವಗಲ್ಲ, ಚನ್ನಬಸಪ್ಪ ಸೂಡಿ, ಈರಪ್ಪ ಪಟ್ಟಣಶೆಟ್ಟಿ, ಸುಶಿಲಮ್ಮ ಮುಸಲವಾಡ, ಮಹಾಂತೇಶ ಉಪ್ಪಿನ, ಸಂಗಮೇಶ ಮೆಣಸಿಗಿ ಸೇರಿದಂತೆ ಇನ್ನೂ ಅನೇಕರು, ಮಹಿಳೆಯರು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಬಸವರಾಜ ಜಕ್ಕಲಿ ಮತ್ತು ಸಾವಿತ್ರಮ್ಮ ಜಕ್ಕಲಿ ದಂಪತಿಗಳನ್ನು ಸನ್ಮಾನಿಸಲಾಯಿತು. ಸೃಷ್ಠಿ ಕತ್ತಿಶೆಟ್ಟರ ಪ್ರಾರ್ಥಿಸಿದರು. ಬಿ. ಬಿ. ಸಂಗಳದ ಸ್ವಾಗತಿಸಿದರು. ಮುಖ್ಯ ಶಿಕ್ಷಕ ಎಸ್. ಎನ್. ಹೂಲಗೇರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಶಿವಯೋಗಿ ಜಕ್ಕಲಿ ನಿರೂಪಿಸಿದರೆ, ಪ್ರಾಚಾರ್ಯ ಶರಣಬಸವೇಶ ಜೋಳದ ವಂದಿಸಿದರು.

> ಕಾಯಕದಲ್ಲಿಯೆ ಭಗವಂತನನ್ನು ಕಾಣುವ ಗುಣವನ್ನು ನಾವು ಬೆಳೆಸಿಕೊಳ್ಳಲು ಪ್ರಯತ್ನಿಸಬೇಕು. ನಾವು ಹೊಂದಿರುವ ಜ್ಞಾನವನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ನಮ್ಮ ಜೀವನ ಸಾರ್ಥಕವಾಗುತ್ತದೆ. ಇಂದು ಇಲ್ಲಿ ಬಸವ ಜಯಂತಿ ಆಚರಣೆ ಮೂಲಕ ಬಸವಣ್ಣನವರನ್ನು ಮತ್ತು ಅವರ ತತ್ವಗಳನ್ನು ಮತ್ತೆ ಮತ್ತೆ ನೆನಪು ಮಾಡಿಕೊಳ್ಳಲು ಶ್ರಮಿಸಿದ ಎಲ್ಲರಿಗೂ ಅಭಿನಂದನೆಗಳು.
>
> –ಡಾ. ಎ. ಕೆ. ನಾಶಿ, ನಿವೃತ್ತ ಉಪನ್ಯಾಸಕ.

### ವೈಚಾರಿಕ ಕ್ರಾಂತಿ ಬೆಳೆಸಿದ ಬಸವಣ್ಣ...

ಜಗತ್ತಿನಲ್ಲಿ ವೈಚಾರಿಕ ಕ್ರಾಂತಿಯನ್ನು ಬೆಳೆಸಿದ ಮೊದಲಿಗರಲ್ಲಿ ಬಸವಣ್ಣನವರು ಪ್ರಮುಖರು. ಬಸವಣ್ಣನವರ ವಿಚಾರಗಳು ನಮ್ಮ ನರನಾಡಿಗಳಲ್ಲಿ ಹರಿದಾಡುವಂತೆ ನಾವುಗಳು ನೋಡಿಕೊಂಡರೆ ನಮ್ಮ ಜೀವನದ ಸಾರ್ಥಕತೆಯನ್ನು ಕಾಣಬಹುದು ಎಂದು ಹೇಳಿದ ಉಪನ್ಯಾಸಕ ಹುಡೇದ ಬಸವಣ್ಣನವರ ಹಲವಾರು ವಚನಗಳನ್ನು ಉದಾಹರಿಸಿ, ಬಸವಣ್ಣನವರು ಸಮಾಜವನ್ನು ತಿದ್ದಲು ಅದ್ಹೇಗೆ ಪ್ರಯತ್ನಿಸಿದರು ಎಂಬುದನ್ನು ಎಳೆಎಳೆಯಾಗಿ ಸಭಿಕರ ಮುಂದೆ ಬಿಡಿಸಿಟ್ಟರು.

# ಶಿರೋಳದಲ್ಲಿ ಬಸವೇಶ್ವರ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಶಿರೋಳ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗ್ರಾಮ ಘಟಕ ಶಿರೋಳ–ಕಲ್ಲಾಪುರ ವತಿಯಿಂದ ಮರೆಗುದ್ದಿ ಕಾಂಪ್ಲೆಕ್ಸ್‌ನಲ್ಲಿ ವಿಶ್ವಗುರು, ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಿಸಲಾಯಿತು.

ನಿವೃತ್ತ ಶಿಕ್ಷಕರಾದ ವಿ ಕೆ ಮರೆಗುದ್ದಿ ಮಾತನಾಡಿ, ಯಾವುದೇ ಅನ್ಯ ಸಮುದಾಯಗಳಿಗೆ ಕೇಡು ಬಯಸದಂತೆ ನಮ್ಮ ಸಮಾಜವನ್ನು ಒಗ್ಗಟ್ಟಿನಿಂದ ಉತ್ತಮವಾಗಿ ಮುನ್ನಡೆಸೋಣ, ವಿಶ್ವಗುರು ಬಸವಣ್ಣನವರ ಸಮ ಸಮಾಜದ ಕನಸಿನ ಹಾದಿಯಲ್ಲಿ ನಾವು ಪಾಲುದಾರರಾಗಿ ಎಲ್ಲ ಸಮಾಜಗಳೊಟ್ಟಿಗೆ ಉತ್ತಮ ಭಾಂದವ್ಯ ಹೊಂದಿ ಸೌಹಾರ್ದಯುತವಾಗಿ ನಡೆದುಕೊಂಡು ಮಾದರಿಯಾಗಿ ಸಮಾಜಕ್ಕೆ ಸೇವೆ ಸಲ್ಲಿಸೋಣ ಎಂದರು.

ಈ ಸಂದರ್ಭದಲ್ಲಿ ಅಪ್ಪಯ್ಯ ಹಿರೇಮಠ, ಮಹಾಂತಪ್ಪ ಶೆಟ್ಟರ್, ಚಂದ್ರಶೇಖರ ಸೋಬರದ, ಪ್ರವೀಣ ಶೆಲ್ಲಿಕೇರಿ, ಉಮೇಶ ಮರೆಗುದ್ದಿ, ಅನಿಲ ಅಂಗಡಿ, ಪ್ರವೀಣ ಸಂಗಳದಶೆಟ್ಟರ್, ಪ್ರಭು ಕಿತ್ತಲಿ, ಬಸಲಿಂಗಪ್ಪ ಚವಡಿ, ಪಾವಡೆಪ್ಪ ಮಾಡಲಗೇರಿ ಸೇರಿದಂತೆ ಸಮಾಜದ ಹಿರಿಯರು ಉಪಸ್ಥಿತರಿದ್ದರು.

### ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ಸಮೃದ್ಧಿ ಸಿದ್ಲಿಂಗ್ ಸನ್ಮಾನಿಸಿ ಸಂಕನೂರ ಅಭಿಮತ

# ವಿದ್ಯೆ ಯಾರೊಬ್ಬರ ಸ್ವತ್ತಲ್ಲ



■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯೆ ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಅದು ಯಾರೊಬ್ಬರ ಸ್ವತ್ತಲ್ಲ ಹಾಗೂ ಯಾವ ಜಾತಿಗೂ ಸೀಮಿತ ಅಲ್ಲ ಎಂದು ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹೇಳಿದರು.

ಅವರು, ಇತ್ತೀಚೆಗೆ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಗೆ 625 ಕ್ಕೆ 622 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದ ಕುಮಾರಿ ಸಮೃದ್ಧಿ ಶ್ರೀಧರ್ ಸಿದ್ಲಿಂಗ್ ಅವರ ಹೆಲ್ತ್‌ಕ್ಯಾಂಪ್ ನಿವಾಸಕ್ಕೆ ಭೇಟಿ ನೀಡಿ ಶಾಲು ಹೊದಿಸಿ ಸನ್ಮಾನಿಸಿ ಮಾತನಾಡಿದರು.

ಜಿಲ್ಲಾ ಉಪನಿರ್ದೇಶಕರಾದ ಎಂ.ಎ. ರೆಡ್ಡೇರ ಮಾತನಾಡಿ, ಕಳೆದ ವರ್ಷ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಯು ರಾಜ್ಯದಲ್ಲಿ 25ನೇ ಸ್ಥಾನದಲ್ಲಿ ಇತ್ತು. ಈ ಬಾರಿ 17ನೇ ಸ್ಥಾನಕ್ಕೆ ಬಂದಿರುವುದು ಸಂತೋಷದ ಸಂಗತಿ ಎಂದು ಹೇಳಿ ಈ ಸಾಧನೆಗೆ ಕಾರಣೀಕರ್ತರಾದ ಜಿಲ್ಲೆಯ ಎಲ್ಲಾ ಸಹಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರನ್ನು ಅಭಿನಂದಿಸಿದರು. ಮುಂಬರುವ ದಿನಗಳಲ್ಲಿ ಗದಗ ಜಿಲ್ಲೆಯನ್ನು ಹತ್ತನೇ ಸ್ಥಾನಕ್ಕೆ ತರುವಲ್ಲಿ ಈಗಿನಿಂದಲೇ ಯೋಜನೆ ರೂಪಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಆರ್.ಎಸ್. ಬುರುಡಿ, ಸಹ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷರಾದ ಪಿ.ಎಚ್. ಕಡಿವಾಳ, ತಾಲೂಕ ಅಧ್ಯಕ್ಷರಾದ ಬಿ.ಎಫ್. ಪೂಜಾರ ಅವರು ವಿದ್ಯಾರ್ಥಿನಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದರು.

ಕೊನೆಗೆ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವಿ.ವಿ.ನಡವಿನಮನಿ ಕಾರ್ಯಕ್ರಮದ ವಂದನಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಸಿಬ್ಬಂದಿಗಳು, ಹೆಲ್ತ್‌ಕ್ಯಾಂಪ್ ನಿವಾಸಿಯಾದ ಅರವಿಂದ ಹುಲ್ಲೂರ ಹಾಗೂ ಓಣಿಯ ಹಿರಿಯರು ಉಪಸ್ಥಿತರಿದ್ದರು.

> –ಪ್ರಾಮಾಣಿಕ ಪ್ರಯತ್ನ ಹಾಗೂ ಪರಿಶ್ರಮದಿಂದ ಈ ರೀತಿಯ ಸಾಧನೆ ಮಾಡಲು ಸಾಧ್ಯ. ಮುಂಬರುವ ದಿನಗಳಲ್ಲಿ ನಾನು ಕಾನೂನು ಶಿಕ್ಷಣ ಅಭ್ಯಾಸ ಮಾಡಿ ಉಚ್ಚ ನ್ಯಾಯಾಲಯದಲ್ಲಿ ನ್ಯಾಯಾಧೀಶೆ ಆಗುವ ಗುರಿ ಹೊಂದಿದ್ದು, ತನ್ನ ಯಶಸ್ಸಿಗೆ ಕಾರಣೀಕರ್ತರಾದ ಲೋಯಲಾ ಪ್ರೌಢಶಾಲೆ ಶಿಕ್ಷಕರಿಗೆ ಹಾಗೂ ಪಾಲಕರಿಗೆ ಧನ್ಯವಾದಗಳು.
>
> **–ಸಮೃದ್ಧಿ ಸಿದ್ಲಿಂಗ್**, ವಿದ್ಯಾರ್ಥಿನಿ

## ಸಕಲೇಶಪುರದ ಪಟ್ಲ ಬೆಟ್ಟದಲ್ಲಿ ಹಿಂಡುಹಿಂಡಾಗಿ ಕಾಣಿಸಿಕೊಂಡ ಕಾಡುಕೋಣಗಳು



■ ವಿಜಯಸಾಕ್ಷಿ ಸುದ್ದಿ, ಹಾಸನ

ಸಕಲೇಶಪುರ ತಾಲ್ಲೂಕು ವನಗೂರು ಕೂಡುರಸ್ತೆಯ ಪಟ್ಲ ಬೆಟ್ಟದ ಬಳಿ ಸುಮಾರು ಹದಿನೈದಕ್ಕೂ ಹೆಚ್ಚು ಕಾಡುಕೋಣಗಳು ಕಾಣಿಸಿಕೊಂಡು ಪ್ರವಾಸಿಗರು ಭಯಭೀತರಾದ ಘಟನೆ ಇಂದು ನಡೆದಿದೆ.

ಪ್ರವಾಸಿ ಸ್ಥಳವೂ ಆಗಿರುವ ಪಟ್ಲ ಬೆಟ್ಟದ ಮೇಲೆ ಫೋರ್ ವೀಲ್ ಜೀಪ್ ಗಳ ಸಹಾಯದಿಂದ ಹೋಗಿ ವನಸಂಪತ್ತನ್ನು ವೀಕ್ಷಿಸಲು ಸಾವಿರಾರು ಪ್ರವಾಸಿಗರು ಪ್ರತಿ ವಾರ ವೀಕೆಂಡ್ ಗಳಲ್ಲಿ ಇಲ್ಲಿಗೆ ಬರುತ್ತಾರೆ.

ಇಂದು ಹಿಂಡುಹಿಂಡಾಗಿ ಕಾಣಿಸಿಕೊಂಡ ಕಾಡೆಮ್ಮೆಗಳು ಮತ್ತು ಕಾಡುಕೋಣಗಳನ್ನು ನೋಡಿ ಪ್ರವಾಸಿಗರು ಭಯಭೀತರಾದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಮರಿಗಳು ಸೇರಿ ಸುಮಾರು ಹದಿನೈದಕ್ಕೂ ಹೆಚ್ಚಿರುವ ಕಾಡೆಮ್ಮೆ, ಕಾಡುಕೋಣಗಳು ಪಟ್ಲ ಬೆಟ್ಟದಲ್ಲಿ ಇಂದು ಕಾಣಿಸಿಕೊಂಡವು. ಕಾಟಿ ಎಂದು ಸ್ಥಳೀಯರು ಕರೆಯುವ ಈ ಪ್ರಾಣಿಗಳು ಜನವಸತಿ ಪ್ರದೇಶಗಳಲ್ಲಿ ಕಾಣಿಸಿಕೊಳ್ಳುವುದು ಅಪರೂಪ. ಕಾಡಿನ ಒಳಭಾಗದಲ್ಲೇ ಇರುವ ಈ ಪ್ರಾಣಿಗಳು ಇಂದು ಬೆಟ್ಟದ ಬಳಿ ಕಾಣಿಸಿಕೊಂಡು ಕಾಡಿನೊಳಗೆ ಹೋಗಿದ್ದನ್ನು ಪ್ರವಾಸಿಗರು, ಸ್ಥಳೀಯರು ತಮ್ಮ ಮೊಬೈಲ್ ಗಳಿಂದ ಸೆರೆಹಿಡಿದರು.

ಪಶ್ಚಿಮಘಟ್ಟ ಭಾಗದಲ್ಲಿ ಕಾಡಾನೆಗಳ ಹಾವಳಿ ವಿಪರೀತವಾಗಿರುವ ಬೆನ್ನಲ್ಲೇ ಹಿಂಡುಹಿಂಡಾಗಿ ಕಾಡು ಕೋಣಗಳು ಕಾಣಿಸಿಕೊಂಡಿರುವುದು ಸ್ಥಳೀಯರ ಆತಂಕಕ್ಕೆ ಕಾರಣವಾಗಿದೆ.

## ಶ್ರೀ ಸಿ. ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆಯ ಎಸ್.ಎಸ್.ಎಲ್.ಸಿ. ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್/ಎಪ್ರಿಲ್ 2024ರಲ್ಲಿ ಜರುಗಿದ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಶ್ರೀ ಸಿ. ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಅಮೋಘ ಸಾಧನೆಗೈದು ಅತ್ಯುತ್ತಮ ಫಲಿತಾಂಶವನ್ನು ನೀಡಿದ್ದಾರೆ.

ಚಂದನಾ ಗಿರೀಶಗೌಡ ಪಾಟೀಲ 625ಕ್ಕೆ 505 ಅಂಕಪಡೆದು 80.8% ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಕುಮಾರಿ ಸುಜಾತ ಕೆ. ಹಿರೇಮಠ 451 ಅಂಕಗಳನ್ನು ಪಡೆದು 72.16% ದ್ವಿತೀಯ ಸ್ಥಾನ ಮತ್ತು ಆರಫಾ ಎಚ್. ನವಲಗುಂದ 447 ಅಂಕಗಳನ್ನು ಪಡೆದು 71.52% ತೃತೀಯ ಸ್ಥಾನ ಪಡೆದಿದ್ದಾಳೆ.

ಶಾಲೆಗೆ ಮತ್ತು ಸಂಸ್ಥೆಗೆ ಕೀರ್ತಿ ತಂದ ವಿದ್ಯಾರ್ಥಿನಿಯರನ್ನು ವಿದ್ಯಾವರ್ಧಕ ಸಂಸ್ಥೆಯ ಗೌರವ ಕಾರ್ಯದರ್ಶಿ ವೀರನಗೌಡ ಅಂದಾನಗೌಡ ಪಾಟೀಲ ಹಾಗೂ ಆಡಳಿತ ಮಂಡಳಿಯ ಸರ್ವ ಸದಸ್ಯರು ಮತ್ತು ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದೆ.

### ಉನ್ನತಿ ಕಂಪ್ಯೂಟರ್ ಸಂಸ್ಥೆಯ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ಪ್ರತಿಯೊಬ್ಬರಿಗೂ ಕಂಪ್ಯೂಟರ್ ಜ್ಞಾನ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಂಪ್ಯೂಟರ್ ಕಷ್ಟಕರವಾದ ಕೆಲಸಗಳನ್ನು ಸುಲಭದ ವಿಧಾನದಲ್ಲಿ ಮಾಡಲು ಸಹಾಯ ಮಾಡುವ ಉಪಯುಕ್ತ ಸಾಧನವಾಗಿದೆ. ಕಂಪ್ಯೂಟರ್ ಇತ್ತೀಚಿನ ದಿನಗಳಲ್ಲಿ ಬಹಳ ಪ್ರಾಮುಖ್ಯತೆಯನ್ನು ಪಡೆದುಕೊಂಡಿದೆ, ಇಂದು ಎಲ್ಲ ರಂಗಗಳಲ್ಲಿ ಕಂಪ್ಯೂಟರ್ ಹಾಸುಹೊಕ್ಕಾಗಿದ್ದು, ಪ್ರತಿಯೊಬ್ಬರಿಗೂ ಕಂಪ್ಯೂಟರ್ ಜ್ಞಾನ ಅವಶ್ಯವಾಗಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ಶನಿವಾರ ಪಟ್ಟಣದ ಉನ್ನತಿ ಕಂಪ್ಯೂಟರ್ ಸಂಸ್ಥೆಯ ವಾರ್ಷಿಕೋತ್ಸವ ಮತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಂಪ್ಯೂಟರ್‌ನ್ನು ಇಂದು ಶಾಲೆಗಳು, ಕಾಲೇಜುಗಳು, ಬ್ಯಾಂಕ್‌ಗಳು, ಆಸ್ಪತ್ರೆಗಳು, ರೈಲು ನಿಲ್ದಾಣಗಳು ಮತ್ತು ವಿಮಾನ ನಿಲ್ದಾಣಗಳು ಮುಂತಾದ ಪ್ರಪಂಚದ ಪ್ರತಿಯೊಂದು ಕ್ಷೇತ್ರದಲ್ಲೂ ಬಳಸಲಾಗುತ್ತಿದೆ. ಶಿಕ್ಷಣ ಕ್ಷೇತ್ರದಲ್ಲಿ ಕಂಪ್ಯೂಟರ್‌ಗಳ ಅವಶ್ಯಕತೆ ಇತ್ತೀಚಿನ ದಿನಗಳಲ್ಲಿ ಅಧಿಕವಾಗಿದೆ ಎಂದು ಹೇಳಿದರು.



ಉಪನ್ಯಾಸಕರಾಗಿ ಆಗಮಿಸಿದ್ದ ವಿಜ್ಞಾನಿ ಸತೀಶ ಗೊರವರ ಕೃತಕ ಬುದ್ಧಿಮತ್ತೆ (artificial intelligence) ಬಗ್ಗೆ ಮಾತನಾಡಿ, ಕೃತಕ ಬುದ್ಧಿಮತ್ತೆ ಎನ್ನುವುದು ಯಂತ್ರಗಳು ಮತ್ತು ಸಾಫ್ಟ್‌ವೇರ್‌ಗಳ ಬುದ್ಧಿವಂತಿಕೆಯಾಗಿದೆ, ಇದು ಮಾನವ ಅಥವಾ ಪ್ರಾಣಿಗಳ ಬುದ್ಧಿವಂತಿಕೆಗಿಂತ ಭಿನ್ನವಾಗಿದೆ. ಮಾನವ ಬುದ್ಧಿವಂತಿಕೆ ಮತ್ತು ಸಮಸ್ಯೆ-ಪರಿಹರಿಸುವ ಸಾಮರ್ಥ್ಯಗಳನ್ನು ಅನುಕರಿಸಲು ಕಂಪ್ಯೂಟರ್‌ಗಳು ಮತ್ತು ಯಂತ್ರಗಳನ್ನು ಸಕ್ರಿಯಗೊಳಿಸುವ ತಂತ್ರಜ್ಞಾನವಾಗಿದೆ ಎಂದು ಕೃತಕ ಬುದ್ಧಿಮತ್ತೆಯ ಕುರಿತು ಸವಿಸ್ತಾರವಾಗಿ ವಿವರಿಸಿದರು.

> ಕಂಪ್ಯೂಟರ್‌ಗಳು ಜೀವನವನ್ನು ಸುಲಭಗೊಳಿಸಿವೆ. ಶಿಕ್ಷಣ, ವಿಜ್ಞಾನ, ತಂತ್ರಜ್ಞಾನ, ವ್ಯಾಪಾರ, ವ್ಯವಹಾರ, ಇನ್ನು ಹಲವು ಕ್ಷೇತ್ರಗಳಲ್ಲಿ ಬಳಸಲಾಗುತ್ತದೆ. ಪಟ್ಟಣದಲ್ಲಿ ಉನ್ನತಿ ಕಂಪ್ಯೂಟರ್ ಎಜುಕೇಶನ್ ಸಂಸ್ಥೆಯು ಕಳೆದ 7 ವರ್ಷಗಳಿಂದ ಜನರಿಗೆ, ವಿದ್ಯಾರ್ಥಿಗಳಿಗೆ ಹತ್ತಿರವಾಗುವಂತಹ ಶಿಕ್ಷಣ ನೀಡುತ್ತಿರುವದು ಉತ್ತಮ ವಿಚಾರವಾಗಿದೆ.
> **-ಡಾ. ಚಂದ್ರು ಲಮಾಣಿ,** ಶಾಸಕ.

ಕಾರ್ಯಕ್ರಮದಲ್ಲಿ ತುಮಕೂರು ಇಂಜಿನಿಯರಿಂಗ್ ಕಾಲೇಜಿನ ಉಪನ್ಯಾಸಕ ಭಾರ್ಗವ ಎಚ್. ಕೆ., ವಿಜಯಕುಮಾರ್ ಹತ್ತಿಕಾಳ, ವಕೀಲ ಶರಣಬಸವ ಅಂಗಡಿ, ಜಿ.ಎಸ್.ಜಾವೂರ್, ಹಾವೇರಿ ಉನ್ನತಿ ಕಂಪ್ಯೂಟರ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಸುನಿಲ್ ಹಿರೇಮಠ್, ಲಕ್ಷ್ಮೇಶ್ವರ ಸಂಸ್ಥೆಯ ನಿರ್ದೇಶಕ ಬಸವರಾಜ ಶೆಟ್ಟರ್ ಉಪಸ್ಥಿತರಿದ್ದರು, ವಿದ್ಯಾರ್ಥಿಗಳಾದ ಗಾಯತ್ರಿ, ಕೀರ್ತಿ ಭವಾನಿ, ಸಂಜಯ ನಿರ್ವಹಿಸಿದರು.

## ಗದುಗಿನ ಕೀರ್ತಿ ಹೆಚ್ಚಿಸಿದ ಸಮೃದ್ಧಿ ಶಿದ್ಲಿಂಗ್‌ಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಹೆಲ್ತ್‌ಕ್ಯಾಂಪ್ ನಿವಾಸಿ ಸಿ.ಡಿ.ಮೇತ್ರಾಣಿ ಅವರ ಮೊಮ್ಮಗಳಾದ ಕುಮಾರಿ ಸಮೃದ್ಧಿ ಶ್ರೀಧರ ಶಿದ್ಲಿಂಗ 2024ರ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ರಾಜ್ಯಕ್ಕೆ 4ನೇ ಸ್ಥಾನ ಪಡೆದು ಹಾಗೂ ಗದಗ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಗದುಗಿನ ಕೀರ್ತಿಯನ್ನು ಹೆಚ್ಚಿಸಿದ್ದಾಳೆ.

ಪ್ರತಿಭಾನ್ವಿತ ವಿದ್ಯಾರ್ಥಿನಿಯಾದ ಸಮೃದ್ಧಿಗೆ ಗದುಗಿನ ಮಾರುತಿ ಬುಕ್ ಡಿಪೋದ ಸುರೇಶ್ ಅಂಗಡಿ, ಜವಾಹರಲಾಲ್ ಖೋಡೆ, ಮನೋಹರ ಕಂಗೂರಿ ಮುಂತಾದವರು ಅವರ ನಿವಾಸಕ್ಕೆ ತೆರಳಿ ಸನ್ಮಾನಿಸಿ ಗೌರವಿಸಿದರು.

## 'ಸರ್ಜಿಕಲ್ ಸ್ಟ್ರೈಕ್' ನಿಜವಾಗಿ ನಡೆದಿದೆಯೋ ಇಲ್ಲವೋ ಗೊತ್ತಿಲ್ಲ: ರೇವಂತ್ ರೆಡ್ಡಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದಕ್ಷಿಣ ರಾಜ್ಯಗಳ ವಿರುದ್ಧ ಬಿಜೆಪಿ ನಡೆಸುತ್ತಿರುವ ತಾರತಮ್ಯ ಮತ್ತು ಪುಲ್ವಾಮಾ ಭಯೋತ್ಪಾದಕ ದಾಳಿಯನ್ನು ತಡೆಯುವಲ್ಲಿ ಗುಪ್ತಚರ ವೈಫಲ್ಯವನ್ನು ಉಲ್ಲೇಖಿಸಿ ಎನ್‌ಡಿಎ ಸರ್ಕಾರದ ವಿರುದ್ಧ ತೆಲಂಗಾಣದ ಮುಖ್ಯಮಂತ್ರಿ ಎ ರೇವಂತ್ ರೆಡ್ಡಿ ವಾಗ್ದಾಳಿಯನ್ನು ನಡೆಸಿದ್ದು, ಸರ್ಜಿಕಲ್ ಸ್ಟ್ರೈಕ್ ನಿಜವಾಗಿ ನಡೆದಿದೆಯೋ ಇಲ್ಲವೋ ಎಂದು ಯಾರಿಗೂ ತಿಳಿದಿಲ್ಲ ಎಂದು ಹೇಳಿದ್ದಾರೆ.

ಬಿಜೆಪಿ ಎಲ್ಲದರಲ್ಲೂ ರಾಜಕೀಯ ಲಾಭ ಪಡೆಯಲು ಯತ್ನಿಸುತ್ತಿದೆ ಎಂದು ಆರೋಪಿಸಿರುವ ಎ ರೇವಂತ್ ರೆಡ್ಡಿ, ಗುಜರಾತ್ ರಾಜ್ಯ ಉತ್ತಮವಾಗಿ ಅಭಿವೃದ್ಧಿ ಹೊಂದಿದ್ದರೂ ಬುಲೆಟ್ ರೈಲು, ಸಾಬರಮತಿ ನದಿ ತೀರ ಮತ್ತು ಗಿಫ್ಟ್ ಸಿಟಿಯಂತಹ ಯೋಜನೆಗಳನ್ನು ಗುಜರಾತ್‌ಗೆ ಏಕೆ ನೀಡಲಾಗಿದೆ ಎಂದು ಕಿಡಿಕಾರಿದ್ದಾರೆ.

ಬಿಹಾರ ಮತ್ತು ಉತ್ತರ ಪ್ರದೇಶದಂತಹ ಹಿಂದುಳಿದ ರಾಜ್ಯಗಳಿಗೆ ಹಣ ನೀಡಿದರೆ ಅದನ್ನು ಅರ್ಥಮಾಡಿಕೊಳ್ಳಬಹುದು ಆದರೆ ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರವು ಅಭಿವೃದ್ಧಿ ಯೋಜನೆಗಳಿಗೆ ಮಂಜೂರಾತಿ ನೀಡುವಲ್ಲಿಯೂ ತಾರತಮ್ಯವನ್ನು ತೋರಿಸಿದೆ. ಜನಸಂಖ್ಯೆಯ ಆಧಾರದ ಮೇಲೆ ಹಣಕಾಸು ನಿಧಿ ನೀಡಿದರೆ ನಾನು ಸ್ವೀಕರಿಸುತ್ತೇನೆ, ಆದರೆ ರಾಜಕೀಯ ಪ್ರಾತಿನಿಧ್ಯದಲ್ಲಿ, ನೀವು ದಕ್ಷಿಣ ರಾಜ್ಯಕ್ಕೆ ರಾಷ್ಟ್ರಪತಿ ಮತ್ತು ಉಪರಾಷ್ಟ್ರಪತಿ ಸ್ಥಾನವನ್ನು ಯಾಕೆ ನೀಡಿಲ್ಲ? ನಾವು ಈ ಬಗ್ಗೆ ಅವರಲ್ಲಿ ಪ್ರಶ್ನೆಗಳನ್ನು ಕೇಳಿದಾಗ, ಅವರು 'ಜೈ ಶ್ರೀ ರಾಮ್' ಎಂದು ಹೇಳುತ್ತಾರೆ, ಎಲ್ಲದಕ್ಕೂ, ಅವರ ಬಳಿ 'ಜೈ ಶ್ರೀ ರಾಮ್' ಎಂಬ ಒಂದು ಉತ್ತರ ಮಾತ್ರ ಇದೆ ಎಂದು ಹೇಳಿದ್ದಾರೆ.

ಮೋದಿಗೆ ಎಲ್ಲವೂ ರಾಜಕೀಯ, ಎಲ್ಲವೂ ಚುನಾವಣೆ ಗೆಲ್ಲುವುದೇ ಆಗಿದೆ. ಹಾಗಾಗಿ ಮೋದಿಯವರ ಚಿಂತನೆ ದೇಶಕ್ಕೆ ಸರಿಯಿಲ್ಲ. ಹಾಗಾಗಿ ದೇಶ ಈಗ ಬಿಜೆಪಿಯಿಲ್ಲದೆ, ಮೋದಿ ಇಲ್ಲದೆ ಇರಬೇಕಾಗಿದೆ. ಪುಲ್ವಾಮಾ ದಾಳಿಯನ್ನು ತಡೆಯುವಲ್ಲಿ ಎನ್‌ಡಿಎ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ರೇವಂತ್ ರೆಡ್ಡಿ, ಐಬಿ ಮತ್ತು ಗುಪ್ತಚರ ಇಲಾಖೆ ಏನು ಮಾಡುತ್ತಿತ್ತು? ಪುಲ್ವಾಮಾ ದಾಳಿಯ ನಂತರ ಸರ್ಜಿಕಲ್ ಸ್ಟ್ರೈಕ್‌ನಿಂದ ರಾಜಕೀಯ ಲಾಭ ಪಡೆಯಲು ಮೋದಿ ಪ್ರಯತ್ನಿಸಿದ್ದಾರೆ, ಮೋದಿಜಿಗೆ ನನ್ನ ಪ್ರಶ್ನೆ ಏನೆಂದರೆ, ನೀವು ಏನು ಮಾಡುತ್ತಿದ್ದೀರಿ? ಪುಲ್ವಾಮಾ ಘಟನೆ ಏಕೆ ಸಂಭವಿಸಿತು? ಏಕೆ ಅದು ಸಂಭವಿಸಲು ಅವಕಾಶ ನೀಡಿದ್ದೀರಿ? ಆಂತರಿಕ ಭದ್ರತೆಯ ಬಗ್ಗೆ ನೀವು ಏನು ಮಾಡುತ್ತಿದ್ದೀರಿ? ನೀವು ಋಃ, ಖಂಘ ನಂತಹ ಏಜೆನ್ಸಿಗಳನ್ನು ಯಾಕೆ ಬಳಸಲಿಲ್ಲ? ನಿಮ್ಮ ಸಮಸ್ಯೆ, ಸರ್ಜಿಕಲ್ ಸ್ಟ್ರೈಕ್ ನಿಜವಾಗಿ ನಡೆದಿದೆಯೋ ಇಲ್ಲವೋ ಯಾರಿಗೂ ತಿಳಿದಿಲ್ಲ ಎಂದು ಹೇಳಿದ್ದಾರೆ.

# ಮನುಷ್ಯ ಉತ್ತಮ ಸಂಸ್ಕಾರ ಮೈಗೂಡಿಸಿಕೊಳ್ಳಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ಉತ್ತಮ ಸಂಸ್ಕಾರ, ಸಂಸ್ಕೃತಿ ಮೈಗೂಡಿಸಿಕೊಳ್ಳಬೇಕು ಎಂದು ಪರಿಪೂರ್ಣಾನಂದ ಸ್ವಾಮೀಜಿ ಹೇಳಿದರು. ಅವರು ರೋಣ ತಾಲೂಕಿನ ಮಲ್ಲಾಪೂರ ಗ್ರಾಮದ ಸಿದ್ಧಾರೂಢರ ಮಠದಲ್ಲಿ ನಡೆದ ಶಿವಾನುಭವ ಕಾರ್ಯಕ್ರಮದಲ್ಲಿ ಮಾತನಾಡಿ, ಯುವಕರಲ್ಲಿ ಇಂದು ಗುರು-ಹಿರಿಯರ ಮೇಲೆ ಗೌರವ ಕಡಿಮೆಯಾಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದ ಅವರು, ಯುವಜನತೆ ದುಶ್ಚಟಗಳಿಗೆ ಬಲಿಯಾಗದೆ ಒಳ್ಳೆಯ ವ್ಯಕ್ತಿತ್ವದೊಂದಿಗೆ ಸನ್ಮಾರ್ಗದಲ್ಲಿ ನಡೆಯಬೇಕು ಎಂದರು.




ಗುರುಮಲ್ಲಯ್ಯ ಮಾತನಾಡಿ, ಮನುಷ್ಯ ಗಳಿಸುವ ಭೌತಿಕ ಸಂಪತ್ತಿಗಿಂತ ಭೌದ್ಧಿಕ ಸಂಪತ್ತಿಗೆ ಹೆಚ್ಚಿನ ಮಹತ್ವವಿದ್ದು, ಇಂದು ಸಿರಿವಂತರಾಗುವುದಕ್ಕಿಂತ ಸಂಸ್ಕಾರಯುತ ಮನುಷ್ಯರಾಗಿ ಬಾಳುವುದು ಅತಿ ಅವಶ್ಯವಾಗಿದೆ. ನಮ್ಮ ನಡೆ-ನುಡಿ, ಆಚಾರ-ವಿಚಾರ, ಪದ್ಧತಿಗಳು ಇತರರಿಗೆ ಮಾದರಿಯಾಗಿರಬೇಕೆ ಹೊರತು ಮಾರಕವಾಗಬಾರದು ಎಂದರು.

ಪ್ರಸಾದ ಸೇವೆ ಗದಿಗೆಪ್ಪ ಮೇಣಸಗಿ ವಹಿಸಿದ್ದರು. ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಸಯ್ಯ ಶಾಸ್ತ್ರಿ ಭಿಕ್ಷಾವತಿಮಠ, ಅಶೋಕ್ ಸತ್ತಿಗೇರಿ, ಪ್ರದೀಪ್ ದಾನರೆಡ್ಡಿ, ರೇಣುಕಗೌಡ ದಾನಪ್ಪಗೌಡ, ಶಿವಣ್ಣ ಅರಹುಣಸಿ, ಬಸವಂತಪ್ಪ ಶಿರೋಳ, ರಾಜಶೇಖರಯ್ಯ, ಡಾ.ವೀರೇಶ ಸತ್ತಿಗೇರಿ, ಪ್ರಸನ್ನ ಸೇರಿದಂತೆ ಗ್ರಾಮಸ್ಥರು ಇದ್ದರು.

## ಪ್ಯಾಲೆಸ್ತೀನ್‌ಗೆ ವಿಶ್ವಸಂಸ್ಥೆ ಸದಸ್ಯತ್ವ: ನಿರ್ಣಯದ ಪರ ಭಾರತ ಮತದಾನ



■ವಿಜಯಸಾಕ್ಷಿ ಸುದ್ದಿ, ನ್ಯೂಯಾರ್ಕ

ವಿಶ್ವಸಂಸ್ಥೆಯಲ್ಲಿ ಪ್ಯಾಲೆಸ್ತೀನ್‌ಗೆ ಪೂರ್ಣ ಸದಸ್ಯತ್ವ ನೀಡಬೇಕೆಂಬ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯದ ಕರಡು ಪರವಾಗಿ ಭಾರತ ಮತ ಚಲಾಯಿಸಿದೆ. ಭದ್ರತಾ ಮಂಡಳಿಯು ಈ ವಿಷಯವನ್ನು ಅನುಕೂಲಕರವಾಗಿ ಮರುಪರಿಶೀಲಿಸುವಂತೆ ನಿರ್ಣಯವು ಶಿಫಾರಸು ಮಾಡಿದೆ.

ಈ ನಿರ್ಣಯದ ಪರವಾಗಿ ಭಾರತ ಸೇರಿದಂತೆ ಒಟ್ಟು 143 ರಾಷ್ಟ್ರಗಳು ಮತ ಚಲಾಯಿಸಿದ್ದರೆ, 25 ರಾಷ್ಟ್ರಗಳು ಗೈರಾಗಿತ್ತು, ಒಂಬತ್ತು ರಾಷ್ಟ್ರಗಳು ನಿರ್ಣಯದ ವಿರುದ್ಧ ಮತ ಚಲಾಯಿಸಿವೆ. ನಿರ್ಣಯದ ವಿರುದ್ಧ ಅಮೆರಿಕ, ಇಸ್ರೇಲ್, ಪಪುವಾ ನ್ಯೂ ಗಿನಿ, ಪಲೌ, ನೌರು, ಮೈಕ್ರೋನೇಷ್ಯಾ, ಅರ್ಜೆಂಟಿನ, ಹಂಗೇರಿ, ಝೆಕಿಯಾ ಮತ ಚಲಾಯಿಸಿವೆ.

ವಿಶ್ವ ಸಂಸ್ಥೆಯ ಸದಸ್ಯತ್ವ ಪಡೆಯಲು ಫೆಲೆಸ್ತೀನ್ ಅರ್ಹವಾಗಿದೆ ಎಂದು ಸಂಯುಕ್ತ ಅರಬ್ ಸಂಸ್ಥಾನ ನಿರ್ಣಯ ಮಂಡಿಸಿದೆ. ವಿಶ್ವಸಂಸ್ಥೆ ಸನ್ನದಿನ ವಿಧಿ 4ರ ಅನ್ವಯ ಸದಸ್ಯತ್ವಕ್ಕೆ ಮಾನ್ಯತೆ ನೀಡಬೇಕು ಎಂದು ನಿರ್ಣಯ ಮಂಡಿಸಲಾಗಿತ್ತು. ಈ ನಿರ್ಣಯದ ಕುರಿತು 100ಕ್ಕೂ ಅಧಿಕ ರಾಷ್ಟ್ರೀಯ ಪ್ರತಿನಿಧಿಗಳು ಮಾತನಾಡಿದ್ದರು.

ಕಳೆದ ತಿಂಗಳು, ಸಾಮಾನ್ಯ ಸಭೆಯಲ್ಲಿ ವ್ಯಾಪಕ ಬೆಂಬಲದ ಹೊರತಾಗಿಯೂ ಭದ್ರತಾ ಮಂಡಳಿಗೆ ಸಲ್ಲಿಸಿದ ಇದೇ ರೀತಿಯ ನಿರ್ಣಯವನ್ನು ಯುನೈಟೆಡ್ ಸ್ಟೇಟ್ಸ್ ವೀಟೋ ಅಧಿಕಾರ ಚಲಾವಣೆ ಮಾಡಿ ರದ್ದುಗೊಳಿಸಿತ್ತು. ಇದೀಗ ಯುಎಸ್ ಮತ್ತೊಮ್ಮೆ ವೀಟೋ ಅಧಿಕಾರ ಚಲಾವಣೆ ಮಾಡುವ ನಿರೀಕ್ಷೆಯಿದೆ.

1974ರಲ್ಲಿ ಪ್ಯಾಲೆಸ್ತೀನ್ ಲಿಬರೇಶನ್ ಆರ್ಗನೈಸೇಶನ್‌ನ್ನು ಪ್ಯಾಲೆಸ್ತೀನಿಯನ್ ಜನರ ಏಕೈಕ ಮತ್ತು ಕಾನೂನುಬದ್ಧ ಪ್ರತಿನಿಧಿಯಾಗಿ ಗುರುತಿಸಿದ ಮೊದಲ ಅರಬ್ ಅಲ್ಲದ ರಾಜ್ಯ ಭಾರತವಾಗಿದೆ. 1988ರಲ್ಲಿ ಪ್ಯಾಲೆಸ್ತೀನ್ ರಾಜ್ಯವನ್ನಾಗಿ ಗುರುತಿಸಿದ ದೇಶಗಳಲ್ಲಿ ಭಾರತವೂ ಒಂದಾಗಿದೆ. 1996ರಲ್ಲಿ ಭಾರತ ತನ್ನ ಪ್ರತಿನಿಧಿ ಕಚೇರಿಯನ್ನು ಕೂಡ ತೆರೆದಿದೆ.

UN ರಾಯಭಾರಿಯಲ್ಲಿ ಭಾರತದ ಖಾಯಂ ಪ್ರತಿನಿಧಿಯಾಗಿರುವ ರುಚಿರಾ ಕಾಂಬೋಜ್ ಅವರು ಈ ಮೊದಲು ಮಾತನಾಡಿ, ಯುಎನ್‌ನಲ್ಲಿ ಸದಸ್ಯತ್ವಕ್ಕಾಗಿ ಪ್ಯಾಲೆಸ್ತೀನ್ ಸಲ್ಲಿಸಿದ್ದ ಅರ್ಜಿಯನ್ನು ಭದ್ರತಾ ಮಂಡಳಿಯು ಅನುಮೋದಿಸಲಿಲ್ಲ, ಇದನ್ನು ವೀಟೋ ಬಳಸಿ ಅಮೆರಿಕ ತಡೆದಿತ್ತು ಎಂದು ಹೇಳಿದ್ದರು.

ಏಪ್ರಿಲ್‌ನಲ್ಲಿ ಪ್ಯಾಲೆಸ್ತೀನ್, ಯುಎನ್ ಸೆಕ್ರೆಟರಿ-ಜನರಲ್ ಆಂಟೋನಿಯೊ ಗುಟೆರೆಸ್‌ಗೆ ಪತ್ರವನ್ನು ಕಳುಹಿಸಿದ್ದು, ಯುಎನ್ ಪೂರ್ಣ ಸದಸ್ಯತ್ವಕ್ಕಾಗಿ ತನ್ನ ಅರ್ಜಿಯನ್ನು ಮತ್ತೊಮ್ಮೆ ಪರಿಗಣಿಸುವಂತೆ ವಿನಂತಿಸಿದೆ. ಒಂದು ರಾಜ್ಯಕ್ಕೆ ಪೂರ್ಣ ಗಿಓ ಸದಸ್ಯತ್ವವನ್ನು ನೀಡಬೇಕಾದರೆ, ಅದರ ಅರ್ಜಿಯನ್ನು ಭದ್ರತಾ ಮಂಡಳಿ ಮತ್ತು ಜನರಲ್ ಅಸೆಂಬ್ಲಿ ಎರಡರಿಂದಲೂ ಅನುಮೋದಿಸಬೇಕು, ಅಲ್ಲಿ ಮೂರನೇ ಎರಡರಷ್ಟು ಸದಸ್ಯರು ಹಾಜರಿರುತ್ತಾರೆ ಮತ್ತು ರಾಜ್ಯವನ್ನು ಪೂರ್ಣ ಸದಸ್ಯರಾಗಿ ಒಪ್ಪಿಕೊಳ್ಳಲು ಮತದಾನದ ಅಗತ್ಯವಿದೆ.

# ಶಿರೋಳದಲ್ಲಿ ಬಸವೇಶ್ವರ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕಿನ ಶಿರೋಳ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘ (ರಿ) ಬೆಂಗಳೂರು, ಗ್ರಾಮ ಘಟಕ ಶಿರೋಳ-ಕಲ್ಲಾಪುರ ವತಿಯಿಂದ ಮರೆಗುದ್ಧಿ ಕಾಂಪ್ಲೆಕ್ಸ್‌ನಲ್ಲಿ ವಿಶ್ವಗುರು, ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಿಸಲಾಯಿತು.



ನಿವೃತ್ತ ಶಿಕ್ಷಕರಾದ ವಿ ಕೆ ಮರೆಗುದ್ಧಿ ಮಾತನಾಡಿ, ಯಾವುದೇ ಅನ್ಯ ಸಮುದಾಯಗಳಿಗೆ ಕೇಡು ಬಯಸದಂತೆ ನಮ್ಮ ಸಮಾಜವನ್ನು ಒಗ್ಗಟ್ಟಿನಿಂದ ಉತ್ತಮವಾಗಿ ಮುನ್ನಡೆಸೋಣ, ವಿಶ್ವಗುರು ಬಸವಣ್ಣನವರ ಸಮ ಸಮಾಜದ ಕನಸಿನ ಹಾದಿಯಲ್ಲಿ ನಾವು ಪಾಲುದಾರರಾಗಿ ಎಲ್ಲ ಸಮಾಜಗಳೊಟ್ಟಿಗೆ ಉತ್ತಮ ಭಾಂದವ್ಯ ಹೊಂದಿ ಸೌಹಾರ್ದಯುತವಾಗಿ ನಡೆದುಕೊಂಡು ಮಾದರಿಯಾಗಿ ಸಮಾಜಕ್ಕೆ ಸೇವೆ ಸಲ್ಲಿಸೋಣ ಎಂದರು.

ಈ ಸಂದರ್ಭದಲ್ಲಿ ಅಪ್ಪಯ್ಯ ಹಿರೇಮಠ, ಮಹಾಂತಪ್ಪ ಶೆಟ್ಟರ್, ಚಂದ್ರಶೇಖರ ಸೋಬರದ, ಪ್ರವೀಣ ಶೆಲ್ಲಿಕೇರಿ, ಉಮೇಶ ಮರೆಗುದ್ಧಿ, ಅನಿಲ ಅಂಗಡಿ, ಪ್ರವೀಣ ಸಂಗಳದಶೆಟ್ಟರ್, ಪ್ರಭು ಕಿತ್ತಲಿ, ಬಸಲಿಂಗಪ್ಪ ಚವಡಿ, ಪಾವೆಡೆಪ್ಪ ಮಾಡಲಗೇರಿ ಸೇರಿದಂತೆ ಸಮಾಜದ ಹಿರಿಯರು ಉಪಸ್ಥಿತರಿದ್ದರು.

## ಬರೆದಿಟ್ಟುಕೊಳ್ಳಿ, ಮೋದಿ ಮತ್ತೆ ದೇಶದ ಪ್ರಧಾನಿಯಾಗಲ್ಲ: ರಾಹುಲ್ ಗಾಂಧಿ



■ವಿಜಯಸಾಕ್ಷಿ ಸುದ್ದಿ, ಕನೌಜ್ (ಉತ್ತರಪ್ರದೇಶ):

ಉತ್ತರ ಪ್ರದೇಶದಲ್ಲಿ ದೊಡ್ಡ ಬಿರುಗಾಳಿಯೇ ಋಓಆಋಂ ಮೈತ್ರಿಕೂಟದ ಬಿರುಗಾಳಿಯೇ ಎದ್ದಿದೆ. ಬರೆದಿಟ್ಟುಕೊಳ್ಳಿ, ನರೇಂದ್ರ ಮೋದಿ ಮತ್ತೆ ಈ ದೇಶದ ಪ್ರಧಾನ ಮಂತ್ರಿ ಆಗುವುದಿಲ್ಲ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಗುಡುಗಿದ್ದಾರೆ.

ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸ್ಪರ್ಧಿಸಿರುವ ಕನೌಜ್ ನಲ್ಲಿ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು ಬೃಹತ್ ಜನಸ್ತೋಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಉತ್ತರ ಪ್ರದೇಶದಲ್ಲಿ ಋಓಆಋಂ ಮೈತ್ರಿಕೂಟ 50ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ. ಬಿಜೆಪಿ ದೊಡ್ಡಮಟ್ಟದ ಸೋಲನ್ನು ಅನುಭವಿಸಲಿದೆ ಎಂದು ನುಡಿದರು. ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷಗಳು ಋಓಆಋಂ ಮೈತ್ರಿಕೂಟದ ಅಂಗಪಕ್ಷಗಳಾಗಿದ್ದು, ಉತ್ತರಪ್ರದೇಶದಲ್ಲಿ ಸ್ಥಾನಹೊಂದಾಣಿಕೆ ಮಾಡಿಕೊಂಡು ಸ್ಪರ್ಧಿಸುತ್ತಿವೆ.

ಸಭೆಯಲ್ಲಿ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಎಎಪಿ ಮುಖಂಡ ಸಂಜಯ್ ಸಿಂಗ್ ಮಾತನಾಡಿದರು. ಕನೌಜ್ ನಲ್ಲಿ ಮೇ 13ರಂದು ಚುನಾವಣೆ ನಡೆಯಲಿದೆ.

# ಹೇಮರಡ್ಡಿ ಮಲ್ಲಮಳ ತಾಳ್ಮೆಗುಣಗಳು ಪ್ರತಿಯೊಬ್ಬ ಮಹಿಳೆಗೂ ಆದರ್ಶ

■ವಿಜಯಸಾಕ್ಷಿ ಸುದ್ದಿ, ಡಂಬಳ

ಅವಿಭಕ್ತ ಕುಟುಂಬದಲ್ಲಿ ಸಂಸಾರಿಕ ಕಡುಕಷ್ಟದ ಸಮಯದಲ್ಲಿ ತಾಳ್ಮೆ, ಶ್ರದ್ಧೆ ಭಕ್ತಿಯ ಮಾರ್ಗದ ಮೂಲಕ ಶ್ರೀಶೈಲದ ಮಲ್ಲಿಕಾರ್ಜುನನ ವರ ಪಡೆದ ಶರಣೆ ಹೇಮರಡ್ಡಿ ಮಲ್ಲಮ್ಮಳ ತಾಳ್ಮೆಗುಣಗಳು ಪ್ರತಿಯೊಬ್ಬ ಮಹಿಳೆಯರಿಗೆ ಆದರ್ಶ ಎಂದು ಹರ್ಲಾಪೂರದ ಅಭಿನವ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹೇಳಿದರು.



ಅವರು, ಡಂಬಳ ಗ್ರಾಮದ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದ ಆವರಣದಲ್ಲಿ ಜರುಗಿದ ಹೇಮರಡ್ಡಿ ಮಲ್ಲಮ್ಮ 602ನೇ ಜಯಂತ್ಯುತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಜಗತ್ತಿನಲ್ಲಿ ದ್ವೇಷದಿಂದ ಏನನ್ನು ಸಾಧಿಸಲು ಸಾಧ್ಯವಿಲ್ಲ. ಪ್ರೀತಿ ಮನೋಭಾವನೆಯನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಉತ್ತಮ ಸಾಧನೆಯನ್ನು ಮಾಡಲು ಸಾಧ್ಯ. ಮನುಷ್ಯರಲ್ಲಿ ಮೂರು ಗುಣವುಳ್ಳವರು ಇರುತ್ತಾರೆ. ಅವರು ಸತ್ತು ಸತ್ತವರು, ಇದ್ದು ಸತ್ತವರು, ಸತ್ತು ಇದ್ದವರು ಇರುವ ಸಮಾಜದಲ್ಲಿ ಪ್ರತಿಯೊಬ್ಬರ ಬದುಕು ಸಾತ್ವಿಕ, ಸತ್ಯ, ನ್ಯಾಯ, ನಿಷ್ಠೆ ಕಾಯಕದ ಬದುಕು ನಿರ್ಮಿಸಿಕೊಳ್ಳುವಂತಾಗಲಿ ಎಂದರು.

ಕೌಟುಂಬಿಕ ಜೀವನದಲ್ಲಿ ಅತ್ತೆಯಾದವಳು ಸೊಸೆಯನ್ನು ಮಗಳಂತೆ, ಸೊಸೆ ಅತ್ತೆಯನ್ನು ತಾಯಿಯಾಗಿ ಪ್ರೀತಿ ವಾತ್ಸಲ್ಯದಿಂದ ನೋಡಿಕೊಳ್ಳುತ್ತಾಳೋ ಆ ಕುಟುಂಬ ಆದರ್ಶ ಮತ್ತು ಸುಂದರ ಕುಟುಂಬ ಆಗಿರಲು ಸಾಧ್ಯ ಎನ್ನುವದನ್ನು ತೋರಿಸಿಕೊಟ್ಟ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ವಿಚಾರಗಳು ಸದಾ ಕಾಲ ಇರುತ್ತವೆ ಎಂದು ಹೇಳಿದರು.


ಜಮಖಂಡಿ ಓಂಕಾರ ಆಶ್ರಮದ ಮಾತೋಶ್ರೀ ಶ್ರೀ ದೇವಿತಾಯಿ ಪ್ರವಚನ ನೀಡಿದರು.

ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಮತ್ತು ಬಸವಣ್ಣ ಅವರ ಭಾವಚಿತ್ರದ ಮೆರವಣಿಗೆಯು ಕುಂಭ ಹೊತ್ತ ನೂರಾರು ಮಹಿಳೆಯರು ಮತ್ತು ವಿವಿಧ ವಾದ್ಯಗಳ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು.

ಕಾರ್ಯಕ್ರಮದಲ್ಲಿ ಜಿ.ವಿ.ಹಿರೇಮಠ, ರಾಜಶೇಖರಯ್ಯ ಹಿರೇಮಠ, ಅಧ್ಯಕ್ಷ ಬಾಳಪ್ಪ ಗಡಗಿ, ಉಪಾಧ್ಯಕ್ಷ ಪರಡ್ಡಿ ಭಾವಿ, ಸುರೇಶ ಕೊಂತಿಕಲ್ಲ, ಮಹೇಶ ಗಡಗಿ, ವಿ.ಎಸ್.ಯರಾಶಿ, ವಿ.ಟಿ.ಮೇಟಿ, ಸಿ.ಟಿ.ಪ್ಯಾಟಿ, ಗವಿಸಿದ್ದಪ್ಪ ಬಂಡಿಹಾಳ, ವಿರುಪಾಕ್ಷಪ್ಪ ಲಕ್ಕುಂಡಿ, ಶಿವರಡ್ಡಿ ಕುಸಗಲ್ಲ, ಪ್ರಸಾಂತ ಗಡಗಿ, ಸೋಮರಡ್ಡಿ ಚಿಕರಡ್ಡಿ, ಸುರೇಶ ಗಡಗಿ, ಮುತ್ತಣ್ಣ ಕೊಂತಿಕಲ್ಲ, ಬಸುರಡ್ಡಿ ಬಂಡಿಹಾಳ, ಶರಣು ಬಂಡಿಹಾಳ, ಮಲ್ಲಣ್ಣ ಗಡಗಿ, ಯಂಕಣ್ಣ ಗಡಗಿ, ನಾಗರಾಜ ಗಡಗಿ, ಶ್ರೀಕಾಂತ ರಾಯರಡ್ಡಿ, ನಿಂಗರಡ್ಡಿ ಕೆಂಚರಡ್ಡಿ, ಶರಣಪ್ಪ ಪ್ಯಾಟಿ, ಮುತ್ತಣ್ಣ ಅಣ್ಣಿಗೇರಿ ಇದ್ದರು.

## ವಿಧಾನ ಪರಿಷತ್ ಚುನಾವಣೆಯಲ್ಲೂ BJP-JDS ಮೈತ್ರಿ ಮುಂದುವರೆಯಲಿದೆ : ಬಿಎಸ್‌ವೈ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ರಾಜ್ಯದಲ್ಲಿ ಎರಡೂ ಪಕ್ಷಗಳ ಮೈತ್ರಿ ಮುಂದುವರೆಯಲಿದೆ. ವಿಧಾನ ಪರಿಷತ್ ಚುನಾವಣೆಯಲ್ಲೂ ಜೆಡಿಎಸ್-ಬಿಜೆಪಿ ಮೈತ್ರಿ ಮುಂದುವರೆಯುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಹೇಳಿದ್ದಾರೆ.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 'ಜೆಡಿಎಸ್‌ಗೆ 2 ಸ್ಥಾನ ಬಿಟ್ಟುಕೊಟ್ಟು ನಾವು 4 ಕ್ಷೇತ್ರಗಳಲ್ಲಿ ಸ್ಪರ್ಧೆ ಮಾಡುತ್ತೇವೆ. ಯಾವ ಕ್ಷೇತ್ರ ಬಿಟ್ಟು ಕೊಡಬೇಕು ಎಂಬುದರ ಬಗ್ಗೆ ಇನ್ನೂ ತೀರ್ಮಾನವಾಗಿಲ್ಲ. ಇಂದು ಸಂಜೆ ಪಕ್ಷದ ಅಧ್ಯಕ್ಷ ಜೆ.ಪಿ. ನಡ್ಡಾ ವಿವರ ಬಿಡುಗಡೆ ಮಾಡಲಿದ್ದಾರೆ' ಎಂದು ಮಾಹಿತಿ ನೀಡಿದರು.

ಲೋಕಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ 400ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ. ನರೇಂದ್ರ ಮೋದಿ ಮತ್ತೆ ಪ್ರಧಾನಿ ಆಗುತ್ತಾರೆ. ಸೂರ್ಯ-ಚಂದ್ರ ಇರುವುದು ಎಷ್ಟು ಸತ್ಯವೋ ಮೋದಿ ಮತ್ತೊಮ್ಮೆ ಪ್ರಧಾನಿ ಆಗುವುದೂ ಅಷ್ಟೇ ಸತ್ಯ. ಮುಂದೆ ಪ್ರಧಾನಿಯಾಗಿ ಏನು ಕೆಲಸ ಮಾಡಬೇಕು ಎಂಬುದನ್ನು ಅವರು ಈಗಾಗಲೇ ಚಿಂತಿಸಿದ್ದಾರೆ. ರಾಜ್ಯದಲ್ಲಿ ನಾವು ಕನಿಷ್ಠ 24-25 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಹೇಳಿದ್ದಾರೆ. ಅ

ಕಾಂಗ್ರೆಸ್‌ನವರು ಏನೇ ಹೇಳಿದರೂ ನಾವು ತಲೆ ಕೆಡಿಸಿಕೊಳ್ಳುವುದಿಲ್ಲ. ಕಾಂಗ್ರೆಸ್‌ನಲ್ಲಿ ಪ್ರಧಾನಿ ಆಗುವ ಯೋಗ್ಯತೆ ಯಾರಿಗಿದೆ? ವಿಧಾನಸಭೆ ಚುನಾವಣೆಯಲ್ಲಿ ಬೇರೆ ಚರ್ಚೆಯಾಗಬಹುದು. ಆದರೆ, ಮೋದಿ ಮತ್ತೊಮ್ಮೆ ಪ್ರಧಾನಿ ಆಗಬೇಕು ಎಂಬುದು ಎಲ್ಲರ ಅಭಿಪ್ರಾಯವಾಗಿದೆ' ಎಂದು ಹೇಳಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka